ಸಿರಿಯಿತು. ಮಲೆನಾಡು ಭಾಗದಲ್ಲಿ ಕೊರತೆಯಿಂದ ಆತಂಕದಲ್ಲಿದ್ದ ರೈತರಿಗೆ

# ಇಎಸ್‌ಐ ನೋಂದಣಿಗೆ ಒಂದು ಬಾರಿ ಅವಕಾಶ

ಪ್ರಜಾವಾಣಿ ವಾರ್ತೆ 19.07.2025 ಪ್ರಜಾವಾಣಿ

**ಮುಖ್ಯಾಂಶಗಳು**

- ಡಿಸೆಂಬರ್ 31ರ ವರೆಗೆ ವಿಮೆ ನೋಂದಣಿಗೆ ಅವಕಾಶ
- ಇಎಸ್‌ಐಸಿ, ಶ್ರಮ ಸುವಿಧಾ, ಪೋರ್ಟಲ್‌ನಲ್ಲಿ ನೋಂದಣಿ
- ನೋಂದಣಿ ಪೂರ್ವ ಅವಧಿಯ ದಾಖಲೆಗಳ ಪರಿಶೀಲನೆ ಇಲ್ಲ

**ಬೆಂಗಳೂರು:** ಕಾರ್ಮಿಕರ ವಿಮಾ ಯೋಜನೆಗೆ ನೋಂದಣಿ ಮಾಡದೇ ಇರುವ ಉದ್ಯೋಗದಾತರು ಯಾವುದೇ ಹಿಂಬಾಕಿ ಮತ್ತು ಪರಿಶೀಲನೆ ಇಲ್ಲದೆ, ನೋಂದಣಿ ಮಾಡಿಸಲು ಕಾರ್ಮಿಕರ ರಾಜ್ಯ ವಿಮಾ ನಿಗಮವು (ಇಎಸ್‌ಐಸಿ) ಒಂದು ಬಾರಿಯ ಅವಕಾಶ ನೀಡಿದೆ.

ಹತ್ತು ಮತ್ತು ಅದಕ್ಕಿಂತ ಹೆಚ್ಚು ಕಾರ್ಮಿಕರು ಕೆಲಸ ಮಾಡುವ ಸಂಸ್ಥೆ, ಕಾರ್ಖಾನೆಗಳು ಇಎಸ್‌ಐ ನೋಂದಣಿ ಮಾಡಿಸುವುದು ಹಾಗೂ ಕಾರ್ಮಿಕರ ಸಾಮಾಜಿಕ ಭದ್ರತೆಗಾಗಿ ವಂತಿಗೆ ಕಟ್ಟುವುದು ಕಡ್ಡಾಯ. ಅಂತಹ ಸಂಸ್ಥೆಗಳು ಆರಂಭವಾದ 15 ದಿನಗಳ ಒಳಗೆ ನೋಂದಣಿ ಮಾಡಿಸಬೇಕು ಎಂದು ಇಎಸ್‌ಐ ಕಾಯ್ದೆ ಹೇಳುತ್ತದೆ.

‘ಹೆಚ್ಚಿನ ಉದ್ಯೋಗದಾತರು ತಮ್ಮ ಕಾರ್ಮಿಕರ ಇಎಸ್‌ಐ ನೋಂದಣಿ ಮಾಡಿಸುವುದಿಲ್ಲ. ಇದರಿಂದಾಗಿ ಕಾರ್ಮಿಕರು ಸಾಮಾಜಿಕ ಭದ್ರತಾ ಸವಲತ್ತುಗಳು, ಆರೋಗ್ಯ ವಿಮೆಯಂತಹ ಸವಲತ್ತುಗಳನ್ನು ಕಳೆದುಕೊಳ್ಳುತ್ತಾರೆ. ಹೀಗೆ ವಿಮೆ ವಂಚಿತರಾದ ಕಾರ್ಮಿಕರನ್ನು ಇಎಸ್‌ಐ ವ್ಯಾಪ್ತಿಗೆ ತರಲು ವಿಶೇಷ ಯೋಜನೆ ರೂಪಿಸಲಾಗಿದೆ’ ಎಂದು ಇಎಸ್‌ಐಸಿ ಪ್ರಾದೇಶಿಕ ನಿರ್ದೇಶಕ ಮನೋಜ್ ಕುಮಾರ್ ಅವರು ಸುದ್ದಿಗೋಷ್ಠಿಯಲ್ಲಿ ತಿಳಿಸಿದರು.

‘ರಾಜ್ಯದಲ್ಲಿ 35 ಲಕ್ಷದಷ್ಟು ಕಾರ್ಮಿಕರು ಇಎಸ್‌ಐ ನೋಂದಣಿ ಹೊಂದಿದ್ದು, 1.40 ಕೋಟಿ ಮಂದಿ ಅದರ ವ್ಯಾಪ್ತಿಯಲ್ಲಿದ್ದಾರೆ. ಈ ಮೊದಲು, ನೋಂದಣಿ ಮಾಡಿಸದೇ ಇದ್ದ ಉದ್ಯೋಗದಾತರಿಂದ ವಂತಿಗೆ ಹಿಂಬಾಕಿ ವಸೂಲಿ ಮಾಡಲಾಗುತ್ತಿತ್ತು. ಈಗ ಹಿಂಬಾಕಿ ಇಲ್ಲದೆಯೇ ನೋಂದಣಿ ಮಾಡಿಸಲು ಅವಕಾಶ ಕಲ್ಪಿಸಲಾಗಿದೆ’ ಎಂದು ತಿಳಿಸಿದರು.

**ಉದ್ಯೋಗ ಪ್ರೋತ್ಸಾಹ ಯೋಜನೆ:** ‘ಮೊದಲ ಬಾರಿಗೆ ಉದ್ಯೋಗ ಪಡೆದು ಕಾರ್ಮಿಕರ ಭವಿಷ್ಯ ನಿಧಿ ಸಂಘಟನೆಯಲ್ಲಿ (ಇಪಿಎಫ್‌ಒ) ನೋಂದಣಿ ಮಾಡಿಸಿದವರಿಗೆ ಪ್ರೋತ್ಸಾಹ ಧನ ನೀಡುವ ಯೋಜನೆ ಇದೇ ಆಗಸ್ಟ್ 1ರಿಂದ ಜಾರಿಯಾಗಲಿದೆ’ ಎಂದು ಮನೋಜ್ ಕುಮಾರ್ ಅವರು ತಿಳಿಸಿದರು.

‘ಮೊದಲ ಬಾರಿಗೆ ಮಾಸಿಕ ₹15,000 ವೇತನ ಪಡೆದವರು ಯೋಜನೆಯ ಪ್ರಯೋಜನ ಪಡೆಯಬಹುದು’ ಎಂದು ಮಾಹಿತಿ ನೀಡಿದರು.

ವಿಜಯವಾಣಿ
ನಂ.1 ಕನ್ನಡ ದಿನಪತ್ರಿಕೆ

### ಶಿಮ್ಲಾದಲ್ಲಿನ ಇಎಸ್ಐಸಿ ಸಭೆಯಲ್ಲಿ ಅನುಮೋದನೆ | ಬೆಂಗಳೂರು ಪ್ರಾದೇಶಿಕ ನಿರ್ದೇಶಕ ಮನೋಜ್‌ಕುಮಾರ್ ಮಾಹಿತಿ

# ಕಾರ್ಮಿಕರ ಭದ್ರತೆ ಹೆಚ್ಚಿಸಲು ಎಸ್‌ಪಿಆರ್‌ಇಇ ಯೋಜನೆ

■ ವಿಜಯವಾಣಿ ಸುದ್ದಿಜಾಲ ಬೆಂಗಳೂರು

ಕಾರ್ಮಿಕರ ಸಾಮಾಜಿಕ ಭದ್ರತೆ ಹೆಚ್ಚಿಸುವ ಉದ್ದೇಶದೊಂದಿಗೆ ಹಾಗೂ ಕಾರ್ಮಿಕರ ರಾಜ್ಯ ವಿಮಾ ನಿಗಮ (ಇಎಸ್ಐಸಿ) ದೇಶಾದ್ಯಂತ ಇಎಸ್ಐ ಸೌಲಭ್ಯ ಪಡೆಯಲು ಅನುಕೂಲವಾಗುವಂತೆ ಉದ್ಯೋಗಿಗಳು ಮತ್ತು ಉದ್ಯೋಗದಾತ ಕಂಪನಿಗಳ ನೋಂದಣಿ ಪ್ರೋತ್ಸಾಹಿಸುವ ನವೀಕೃತ ಯೋಜನೆ (ಎಸ್‌ಪಿಆರ್‌ಇಇ-2025) ಜಾರಿಯಾಗಿದೆ.

ಈ ಕುರಿತು ಇಎಸ್ಐಸಿ ಬೆಂಗಳೂರು ಪ್ರಾದೇಶಿಕ ನಿರ್ದೇಶಕ ಮನೋಜ್ ಕುಮಾರ್ ಮಾತನಾಡಿ, ಶಿಮ್ಲಾದಲ್ಲಿ ನಡೆಸಿದ ಇಎಸ್ಐಸಿಯ 196ನೇ ಸಭೆಯಲ್ಲಿ ಕೇಂದ್ರ ಕಾರ್ಮಿಕ ಸಚಿವರು ನವೀಕೃತ ಯೋಜನೆ ಪ್ರಕಟಿಸಿದ್ದಾಗಿ ಶುಕ್ರವಾರ ಸುದ್ದಿಗೋಷ್ಠಿಯಲ್ಲಿ ತಿಳಿಸಿದರು.

ಇಎಸ್ಐಸಿ ಬೆಂಗಳೂರಿನಲ್ಲಿ ಪ್ರಾದೇಶಿಕ ಕಚೇರಿ ಹೊಂದಿದ್ದು, ಬೆಂ. ದಕ್ಷಿಣ (ಬೊಮ್ಮಸಂದ್ರ), ಬೆಂ. ಉತ್ತರ (ಪೀಣ್ಯ), ಕಲಬುರಗಿ, ಹುಬ್ಬಳ್ಳಿ, ಮಂಗಳೂರು ಮತ್ತು ಮೈಸೂರಿನಲ್ಲಿ ಉಪ ಪ್ರಾದೇಶಿಕ ಕಚೇರಿಗಳನ್ನು ಹೊಂದಿದೆ. ರಾಜ್ಯದ 31 ಜಿಲ್ಲೆಗಳಲ್ಲೂ ಇಎಸ್ಐ ಯೋಜನೆ ಜಾರಿಗೆ ತರಲಾಗಿದೆ. 35 ಲಕ್ಷ ವಿಮಾದಾರರು ಮತ್ತು 140 ಲಕ್ಷ ಕುಟುಂಬ ಸದಸ್ಯರು ಯೋಜನೆ ಫಲಾನುಭವಿಗಳಾಗಿದ್ದಾರೆ. 1.87 ಲಕ್ಷ ಉದ್ಯೋಗದಾತರು ಯೋಜನೆಯಡಿ ನೋಂದಾಯಿತರಾಗಿದ್ದಾರೆ ಎಂದರು.

**6 ತಿಂಗಳ ಅವಕಾಶ:** ನವೀಕೃತ ಯೋಜನೆಯಡಿ ನೋಂದಣಿ ಮಾಡಿಕೊಳ್ಳದ ಕಂಪನಿಗಳು, ಅರ್ಧಕ್ಕೆ ಕೆಲಸ ತೊರೆದಿರುವ ತಾತ್ಕಾಲಿಕ ಗುತ್ತಿಗೆ ಆಧಾರಿತ ಉದ್ಯೋಗಿಗಳಿಗೆ ನೋಂದಣಿಗೆ ಅವಕಾಶ ಕಲ್ಪಿಸಲಾಗಿದೆ. ನೋಂದಣಿ ಮಾಡಿಕೊಂಡ ದಿನದಿಂದ ಉದ್ಯೋಗಿಗಳು ಇಎಸ್ಐ ವ್ಯಾಪ್ತಿಗೆ ಬರಲಿದ್ದಾರೆ. ಯೋಜನೆಯು 6 ತಿಂಗಳು (ಜು.1ರಿಂದ ಡಿ.31ರವರೆಗೂ) ಜಾರಿಯಲ್ಲಿರಲಿದೆ ಎಂದು ಮನೋಜ್ ಕುಮಾರ್ ಹೇಳಿದರು.

**ಕ್ಷಮಾದಾನ ಯೋಜನೆ ಜಾರಿ:** ಇಎಸ್ಐಸಿ ಪ್ರಾದೇಶಿಕ ಕಚೇರಿ ಜಂಟಿ ನಿರ್ದೇಶಕ ಅರಸರ ಕಿಶೋರ್ ಮಾತನಾಡಿ, ಇಎಸ್ಐಸಿ ಕಾಯ್ದೆ ಅನುಸರಣೆಯನ್ನು ಉತ್ತೇಜಿಸಲು ಹಾಗೂ ಸರಳ ವ್ಯವಹಾರ ಪ್ರೋತ್ಸಾಹಿಸಲು 'ಕ್ಷಮಾದಾನ ಯೋಜನೆ'ಗೂ ಅನುಮೋದನೆ ನೀಡಲಾಗಿದೆ. ಯೋಜನೆ ವರ್ಷದ ಅವಧಿಗೆ (ಅ.1ರಿಂದ 2026ರ ಸೆ.30ರವರೆಗೆ) ಜಾರಿಯಲ್ಲಿರಲಿದೆ. ಇದರಡಿ ಉದ್ಯೋಗದಾತರು ಮತ್ತು ನಿಗಮದ ನಡುವಿನ ವ್ಯಾಜ್ಯಗಳನ್ನು ಪರಸ್ಪರ ಇತ್ಯರ್ಥಪಡಿಸಿ ಪರಿಹಾರ ಕಂಡುಕೊಳ್ಳಬಹುದು ಎಂದರು.

ನಿಗಮದ ಜಂಟಿ ನಿರ್ದೇಶಕರಾದ ಸುನೀಲ್‌ಕುಮಾರ್ ಮೆಹತೋ, ಮನೀಷ್ ಗುಪ್ತ, ದರ್ಬರಾ ಸಿಂಗ್, ಉಪ ನಿರ್ದೇಶಕ ವಿನೋದ್ ಖಾರಕ್ವಾಲ್, ಅಭಿಷೇಕ್ ಕುಮಾರ್ ಸಿಂಗ್, ಮಹೇಶ್ ಕುಮಾರ್ ಪಾಂಡೆ, ಸಂಗ್ ಪ್ರಿಯಾ ಆನಂದ್ ಸುದ್ದಿಗೋಷ್ಠಿಯಲ್ಲಿದ್ದರು.




ಇಎಸ್ಐಸಿ ಬೆಂಗಳೂರು ಪ್ರಾದೇಶಿಕ ಕಚೇರಿಯಲ್ಲಿ ಶುಕ್ರವಾರ ಏರ್ಪಡಿಸಿದ್ದ ಸುದ್ದಿಗೋಷ್ಠಿಯಲ್ಲಿ ನಿರ್ದೇಶಕ ಮನೋಜ್‌ಕುಮಾರ್ ಮಾತನಾಡಿದರು. ಜಂಟಿ ನಿರ್ದೇಶಕರಾದ ಅರಸರ ಕಿಶೋರ್, ಕಣಿತ ಸೆಲ್ವಿ ಇದ್ದರು.

## ಉದ್ಯೋಗ ಪ್ರೋತ್ಸಾಹಕ ಯೋಜನೆ

ಇಎಸ್ಐಸಿ ಪ್ರಾದೇಶಿಕ ಕಚೇರಿ ಜಂಟಿ ನಿರ್ದೇಶಕಿ ಕಣಿತ ಸೆಲ್ವಿ ಮಾತನಾಡಿ, ಇಎಸ್ಐಸಿ ಸೋದರ ಸಂಸ್ಥೆ ಕಾರ್ಮಿಕರ ಭವಿಷ್ಯ ನಿಧಿ ಸಂಘಟನೆ (ಇಪಿಎಫ್‌ಒ) ಉದ್ಯೋಗ ಪ್ರೋತ್ಸಾಹಕ ಯೋಜನೆ (ಇಎಲ್ಐ) ಪರಿಚಯಿಸಿದೆ. ಇದರಡಿ ಸಾಮಾಜಿಕ ಭದ್ರತೆಯ ಎಲ್ಲ ವಲಯಗಳಲ್ಲಿ ವಿಶೇಷವಾಗಿ ಉತ್ಪಾದಕ ವಲಯದಲ್ಲಿ ಉದ್ಯೋಗ ಸೃಷ್ಟಿ ಪ್ರೋತ್ಸಾಹ, ಮೊದಲ ಬಾರಿಗೆ ಮಾಸಿಕ 15 ಸಾವಿರ ರೂ. ವೇತನ ಪಡೆದ ಉದ್ಯೋಗಿಗಳ ಉದ್ಯೋಗದಾತರು 2 ವರ್ಷಗಳವರೆಗೆ ಪ್ರೋತ್ಸಾಹದಾಯಕ ಇನ್ಸೆಂಟಿವ್ ಪಡೆಯಬಹುದಾಗಿದೆ ಮತ್ತು ಉತ್ಪಾದನಾ ವಲಯದಲ್ಲಿ ಹೆಚ್ಚುವರಿ ಉದ್ಯೋಗ ಸೃಷ್ಟಿಸಿದಲ್ಲಿ ಮತ್ತೆ 2 ವರ್ಷಕ್ಕೆ ವಿಸ್ತರಿಸಲಾಗುವುದು. ಇದು 2025ರ ಆ.1ರಿಂದ ಜು.31ರ ಅವಧಿಯಲ್ಲಿ ಸೃಷ್ಟಿಯಾದ ಉದ್ಯೋಗಗಳಿಗೆ ಮಾತ್ರ ಅನ್ವಯವಾಗಲಿದೆ ಎಂದರು.

ಬೆಂಗಳೂರು ಆವೃತ್ತಿ
ಜುಲೈ 19, 2025 ಪುಟ ಸಂಖ್ಯೆ 4
ನಡೆಸಲ್ಪಡುತ್ತಿದೆ: erelego.com

ಹೊಸ ದಿಗಂತ

2

19 Jul 2025

# ಎಲ್ಲ ಜಿಲ್ಲೆಗಳಲ್ಲೂ ಇಎಸ್‌ಐ ಯೋಜನೆ: ಮನೋಜ್‌ಕುಮಾರ್

• **ಬೆಂಗಳೂರು:** ಇಎಸ್‌ಐ ಯೋಜನೆಯನ್ನು ರಾಜ್ಯದ ಎಲ್ಲ 31 ಜಿಲ್ಲೆಗಳಲ್ಲಿ ಜಾರಿಗೆ ತರಲಾಗಿದೆ. ಈ ಯೋಜನೆಯ ಸೌಲಭ್ಯವನ್ನು ಪಡೆದುಕೊಳ್ಳಲು ಅನುಕೂಲವಾಗುವಂತೆ ಉದ್ಯೋಗಿಗಳು ಮತ್ತು ಉದ್ಯೋಗದಾತ ಕಂಪನಿಗಳ ನೋಂದಣಿ ಪ್ರೋತ್ಸಾಹಿಸುವ ಸ್ಕೀಮ್ ಫಾರ್ ಪ್ರೊಮೋಷನ್ ಆಫ್ ರಿಜಿಸ್ಟ್ರೇಷನ್ ಆಫ್ ಎಂಪ್ಲಾಯರ್ಸ್ ಅ್ಯಂಡ್ ಎಂಪ್ಲಾಯೀಸ್(ಎಸ್‌ಪಿಆರ್‌ಇಇ) ಎಂಬ ನವೀಕೃತ ಯೋಜನೆಯನ್ನು ಕಾರ್ಮಿಕರ ರಾಜ್ಯ ವಿಮಾ ನಿಗಮ (ಇಎಸ್‌ಐಸಿ) ಜಾರಿಗೆ ತಂದಿದ್ದು ನೋಂದಣಿಗೆ ಮತ್ತೊಂದ ಅವಕಾಶ ನೀಡಿದೆ.

ಈ ಕುರಿತು ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಕಾರ್ಮಿಕರ ರಾಜ್ಯ ವಿಮಾ ನಿಗಮದ ಪ್ರಾದೇಶಿಕ ನಿರ್ದೇಶಕ ಮನೋಜ್‌ಕುಮಾರ್ ಅವರು, ಈ ನವೀಕೃತ ಯೋಜನೆಯಡಿ ಇನ್ನೂ ನೋಂದಣಿ ಮಾಡಿಕೊಳ್ಳದ ಕಂಪನಿಗಳು, ಅರ್ಧಕ್ಕೆ ಕೆಲಸ ತೊರೆದಿರುವ ತಾತ್ಕಾಲಿಕ, ಗುತ್ತಿಗೆ ಆಧಾರಿತ ಉದ್ಯೋಗಿಗಳಿಗೆ ನೋಂದಣಿಗೆ ಅವಕಾಶ ಲಭಿಸಲಿದೆ. ನೋಂದಣಿ ಮಾಡಿಕೊಂಡ ದಿನದಿಂದ ಉದ್ಯೋಗಿಗಳು ಐಎಸ್‌ಐ ಸೌಲಭ್ಯದ ವ್ಯಾಪ್ತಿಗೆ ಬರಲಿದ್ದಾರೆ. 2025 ಜು. 1 ರಿಂದ ಡಿ. 31 ರವರೆಗೆ ನೋಂದಣಿಗೆ ಅವಕಾಶ ಕಲ್ಪಿಸಲಾಗಿದೆ ಎಂದರು.

ಇಎಸ್‌ಐ ಯೋಜನೆಯನ್ನು ರಾಜ್ಯದ 31 ಜಿಲ್ಲೆಗಳಲ್ಲಿ ಜಾರಿಗೆ ತರಲಾಗಿದದು ಒಟ್ಟು 35 ಲಕ್ಷ ವಿಮಾದಾರರು ಮತ್ತು 140 ಲಕ್ಷ ಕುಟುಂಬ ಸದಸ್ಯರು ಈ ಯೋಜನೆಯ ಫಲಾನುಭವಿಗಳಾಗಿದ್ದಾರೆ. ಒಟ್ಟು 1.87 ಲಕ್ಷ ಉದ್ಯೋಗದಾತರು ಈ ಯೋಜನೆಯಡಿ ನೋಂದಾಯಿಸಿಕೊಂಡಿದ್ದಾರೆ. ಈ ಯೋಜನೆಯನ್ನು ಮತ್ತಷ್ಟು ವಿಸ್ತರಿಸುವ ಮತ್ತು ಸಾಮಾಜಿಕ ರಕ್ಷಣೆಯನ್ನು ಗರಿಷ್ಠ ಕಾರ್ಮಿಕ ಉದ್ಯೋಗಿಗಳನ್ನು ಕಾಯ್ದೆಯಡಿ ತರುವ ಉದ್ದೇಶದಿಂದ ನೋಂದಾಯಿಸಿಕೊಳ್ಳಲು ಅವಕಾಶ ನೀಡಲಾಗಿದೆ ಎಂದು ಹೇಳಿದರು.

ಕಾರ್ಮಿಕರ ರಾಜ್ಯ ವಿಮಾ ನಿಗಮವು ಪ್ರಸ್ತುತ ಬೆಂಗಳೂರಿನ ಬಿನ್ನಿಪೇಟೆಯಲ್ಲಿ ಪ್ರಾದೇಶಿಕ ಕಚೇರಿ ಹೊಂದಿದ್ದು, 6 ಉಪ ಪ್ರಾದೇಶಿಕ ಕಚೇರಿಗಳನ್ನು ಬೆಂ.ದಕ್ಷಿಣ, ಬೊಮ್ಮಸಂದ್ರ, ಬೆಂಗಳೂರು ಉತ್ತರ-ಪೀಣ್ಯ, ಕಲಬುರಗಿ, ಹುಬ್ಬಳ್ಳಿ, ಮಂಗಳೂರು ಮತ್ತು ಮೈಸೂರು ಜಿಲ್ಲೆಗಳಲ್ಲಿ ತೆರೆಯಲಾಗಿದೆ ಎಂದರು.

## ಕ್ಷಮಾದಾನ ಯೋಜನೆ

**ಕಾರ್ಮಿಕರ ರಾಜ್ಯ ವಿಮಾ ನಿಗಮವು ಕ್ಷಮಾದಾನ ಯೋಜನೆ 2025ಕ್ಕೂ ಅನುಮೋದನೆ ನೀಡಿದೆ. 2025ರ ಅ. 1 ರಿಂದ 2026ರ ಸೆ. 30 ರವರೆಗೆ ಈ ಯೋಜನೆ ಜಾರಿಯಲ್ಲಿ ಇರಲಿದೆ. ಉದ್ಯೋಗಿಗಳು ಮತ್ತು ಉದ್ಯೋಗದಾತ ಕಂಪನಿಗಳು ಇ.ಎಸ್‌ಐ ಸಂಬಂಧಿತ ಪ್ರಕರಣಗಳನ್ನು ಈ ಯೋಜನೆಯಡಿಗೆ ಒಂದೇ ಬಾರಿಗೆ ಇತ್ಯರ್ಥಪಡಿಸಿಕೊಳ್ಳಬಹುದು. ರಾಜೀ ಸಂಧಾನಕ್ಕೂ ಅವಕಾಶವಿದೆ ಎಂದು ತಿಳಿಸಿದರು.**

**ಜಾರಿ** ನೋಂದಣಿ ದಿನದಿಂದಲೇ ಯೋಜನೆಯ ಲಾಭ: ಇಎಸ್‌ಐಸಿ ಪ್ರಾದೇಶಿಕ ನಿರ್ದೇಶಕ

# ‘ಸ್ಪ್ರೀ’ ಯೋಜನೆಯಡಿ ನೋಂದಣಿಗೆ ಡಿ.31ರ ವರೆಗೆ ರಾಜ್ಯದಲ್ಲಿ ಅವಕಾಶ

• **ಕನ್ನಡಪ್ರಭ ವಾರ್ತೆ** ಬೆಂಗಳೂರು

ರಾಜ್ಯದ ಎಲ್ಲಾ 31 ಜಿಲ್ಲೆಗಳಲ್ಲಿ ಇಎಸ್‌ಐ ಯೋಜನೆ ಸೌಲಭ್ಯವನ್ನು ಪಡೆದುಕೊಳ್ಳಲು ಅನುಕೂಲವಾಗುವಂತೆ ಉದ್ಯೋಗಿಗಳು ಮತ್ತು ಉದ್ಯೋಗದಾತ ಕಂಪನಿಗಳ ನೋಂದಣಿ ಪ್ರೋತ್ಸಾಹಿಸುವ ಎಸ್‌ಪಿಆರ್‌ಆರ್‌ಇ (ಸ್ಕೀಮ್ ಫಾರ್ ಪ್ರೊಮೋಷನ್ ಆಫ್ ರಿಜಿಸ್ಟ್ರೇಷನ್ ಆಫ್ ಎಂಪ್ಲಾಯರ್ಸ್ ಆ್ಯಂಡ್ ಎಂಪ್ಲಾಯೀಸ್) ಎಂಬ ನವೀಕೃತ ಯೋಜನೆಯನ್ನು ಕಾರ್ಮಿಕರ ರಾಜ್ಯ ವಿಮಾ ನಿಗಮ (ಇಎಸ್‌ಐಸಿ) ಜಾರಿಗೆತಂದಿದ್ದು ನೋಂದಣಿಗೆ 2025 ಡಿಸೆಂಬರ್ 31ರವರೆಗೆ ಅವಕಾಶವಿದೆ.

ಶುಕ್ರವಾರ ಈ ಮಾಹಿತಿ ನೀಡಿದ ಇಎಸ್‌ಐಸಿ ಪ್ರಾದೇಶಿಕ ನಿರ್ದೇಶಕ ಮನೋಜ್ ಕುಮಾರ್ ಅವರು, ಈ ನವೀಕೃತ ಯೋಜನೆಯಡಿ ಇನ್ನೂ ನೋಂದಣಿ ಮಾಡಿಕೊಳ್ಳದ ಕಂಪನಿಗಳು, ಅರ್ಧಕ್ಕೆ ಕೆಲಸ ತೊರೆದಿರುವ ತಾತ್ಕಾಲಿಕ, ಗುತ್ತಿಗೆಆಧಾರಿತಉದ್ಯೋಗಿಗಳಿಗೆ ನೋಂದಣಿಗೆ ಅವಕಾಶ ಲಭಿಸಲಿದೆ. ನೋಂದಣಿ ಮಾಡಿಕೊಂಡ ದಿನದಿಂದ ಉದ್ಯೋಗಿಗಳು ಐಎಸ್‌ಐ ಸೌಲಭ್ಯದ ವ್ಯಾಪ್ತಿಗೆ ಬರಲಿದ್ದಾರೆ ಎಂದು ವಿವರಿಸಿದರು.

**ಕ್ಷಮಾದಾನ ಯೋಜನೆ:** ಕಾರ್ಮಿಕರ ರಾಜ್ಯ ವಿಮಾ ನಿಗಮವು ಕ್ಷಮಾದಾನ ಯೋಜನೆ 2025ಕ್ಕೂ ಅನುಮೋದನೆ ನೀಡಿದೆ. 2025, ಅಕ್ಟೋಬರ್1ರಿಂದ 2026ರ ಸೆಪ್ಟೆಂಬರ್ 30ರವರೆಗೆ ಈ ಯೋಜನೆ ಜಾರಿಯಲ್ಲಿರಲಿದೆ ಎಂದು ತಿಳಿಸಿದರು.

**ಉದ್ಯೋಗ ಪ್ರೋತ್ಸಾಹಕ ಯೋಜನೆ:** ಉತ್ಪಾದಕ ವಲಯದಲ್ಲಿ ಉದ್ಯೋಗ ಸೃಷ್ಟಿಯನ್ನು ಪ್ರೊತ್ಸಾಹಿಸುವ ಉದ್ದೇಶದಿಂದ ‘ಉದ್ಯೋಗ ಪ್ರೋತ್ಸಾಹ ಯೋಜನೆ’ (ಇಎಲ್‌ಐ) ಜಾರಿಗೆ ತರಲಾಗಿದೆ. ಈ ಯೋಜನೆಯಡಿ ಮೊದಲ ಬಾರಿ ಮಾಸಿಕ 15 ಸಾವಿರ ರು.ವರೆಗೆ ವೇತನ ಪಡೆದ ಉದ್ಯೋಗಿಗಳ ಉದ್ಯೋಗದಾತರು 2 ವರ್ಷ ವರೆಗೆ ಪ್ರೋತ್ಸಾಹದಾಯಕ ಇನ್ಸೆಂಟಿವ್ ಪಡೆಯಬಹುದು. ಉತ್ಪಾದನಾ ವಲಯದಲ್ಲಿ ಹೆಚ್ಚುವರಿ ಉದ್ಯೋಗ ಸೃಷ್ಟಿಸಿದಲ್ಲಿ ಮತ್ತೆರಡು ವರ್ಷಕ್ಕೆ ವಿಸ್ತರಿಸಲಾಗುವುದು. ಯೋಜನೆಯಡಿ ದೊರೆಯುವ ಸೌಲಭ್ಯ 2025, ಆಗಸ್ಟ್ 1ರಿಂದ 2027 ಜುಲೈ 31ರ ಅವಧಿಯಲ್ಲಿ ಸೃಷ್ಟಿಯಾದ ಉದ್ಯೋಗಗಳಿಗೆ ಅನ್ವಯಿಸುತ್ತದೆ ಎಂದು ಹೇಳಿದರು.

**ಸ್ಪ್ರೀ ಯೋಜನೆ:** ಸಾಮಾಜಿಕ ಭದ್ರತಾ ವ್ಯಾಪ್ತಿ ವಿಸ್ತರಿಸುವ ವಿಶೇಷ ಉಪಕ್ರಮವಾಗಿ ಕಾರ್ಮಿಕರ ಕಲ್ಯಾಣಕ್ಕಾಗಿ ‘ಉದ್ಯೋಗದಾತರು ಮತ್ತು ಉದ್ಯೋಗಿಗಳ ನೋಂದಣಿ ಉತ್ತೇಜಿಸುವ ಯೋಜನೆ-2025’ (ಸ್ಪ್ರೀ) ಅನ್ನು ಕಾರ್ಮಿಕ ರಾಜ್ಯ ವಿಮಾ ನಿಗಮದಿಂದ ಜಾರಿಗೊಳಿಸಲಾಗಿದೆ.

# ESIC LAUNCHES SPREE 2025 TO BOOST REGISTRATIONS

In a bid to expand social security coverage, the Employees State Insurance Corporation (ESIC) has launched the Scheme for Promotion of Registration of Employers and Employees (Spree) 2025, offering incentives and an amnesty period for industries.

ESIC Karnataka regional director Manoj Kumar said firms with 10 or more employees must register on ESIC, Shram Suvidha, or MCA portals. "No contribution or benefit will apply for the period prior to registration. No inspection or demand of past records will be made for the pre-registration period. There will be no prosecution for non-compliance with statutory laws," he said. Deputy director AS Kanithaselvi of the Bommasandra sub-regional office added, "The corporation is now in a facilitating mode, not enforcement mode during Spree."

Under the Employment Linked Incentive (ELI) scheme, employers can receive up to Rs 3,000 per new employee, while workers may earn Rs 15,000 in incentives. ESIC has also approved Amnesty Scheme 2025, aimed at resolving disputes between Oct 1, 2025, and Sept 30, 2026. TNN

19.07.2025 The Time's of India

# ESIC's initiative for unregistered employers, employees to enrol

**The Hindu Bureau**
BENGALURU

The Employees' State Insurance Corporation (ESIC) has rolled out a special initiative offering a one-time opportunity for unregistered employers and employees, including contractual and temporary workers, to enrol in the ESI scheme without facing inspections or demands for past dues.

The initiative called SPREE (Scheme for Promotion of Registration of Employers and Employees), which has been active since July 1, 2025, will be on till December 31, 2025. In Karnataka, the ESI scheme is providing social security cover to 35 lakh insured persons and their family members, totalling 1.4 crore beneficiaries registered through 1.87 lakh employers.

Addressing presspersons here on Friday, Manoj Kumar, Regional Director, ESI Corporation, Bengaluru, said employers could digitally register their units and employees via the ESIC, Shram Suvidha, and the Ministry of Corporate Affairs portal under SPREE.

"The registration will be considered valid from the date declared by the employer. No inspection or demand will be made for the pre-registration period," he said.

**No legal action**

Mr. Kumar said the scheme would eliminate the fear of retrospective penalties, legal action due to non-registration and backdated dues and simplifies the registration process.

Pointing out that the ESI Corporation has also launched/approved a one-time 'Amnesty Scheme 2025', Mr. Kumar said the scheme would help resolve disputes and encourage compliance. "It offers a window for dispute resolution from October 1, 2025, to September 30, 2026, with an aim to reduce litigation by providing a mechanism for mutual settlements, promoting ease of doing business, and fostering goodwill among the employers, " he said.

Besides, the Employment Linked Incentive scheme was recently approved by the Centre.

CM
YK

19.07.2025 The Hindu

# ಕಾರ್ಮಿಕರ ರಾಜ್ಯ ವಿಮಾ ನಿಗಮದಿಂದ ಸಾಮಾಜಿಕ ಭದ್ರತಾ ವ್ಯಾಪ್ತಿಯನ್ನು ವಿಸ್ತರಿಸಲು ಒಂದು ವಿಶೇಷ ಉಪಕ್ರಮ : ಮನೋಜ್ ಕುಮಾರ್

ಬೆಂಗಳೂರು : ಕಾರ್ಮಿಕ ರಾಜ್ಯ ವಿಮಾ ನಿಗಮದಿಂದ ಸಾಮಾಜಿಕ ಭದ್ರತಾ ವ್ಯಾಪ್ತಿಯನ್ನು ವಿಸ್ತರಿಸುವ ಸಲುವಾಗಿ ವಿಶೇಷ ಉಪಕ್ರಮವಾಗಿ, ಕಾರ್ಮಿಕರ ಕಲ್ಯಾಣಕ್ಕಾಗಿ ಸ್ಪ್ರೀ ಯೋಜನೆಯನ್ನು ಜಾರಿಗೊಳಿಸಲಾಗಿದೆ ಎಂದು ಪ್ರಾದೇಶಿಕ ನಿರ್ದೇಶಕರು ಮನೋಜ್ ಕುಮಾರ್ ತಿಳಿಸಿದರು.

ಬೆಂಗಳೂರಿನ ಕಾರ್ಮಿಕರ ರಾಜ್ಯ ವಿಮಾ ನಿಗಮದ ಪ್ರಾದೇಶಿಕ ಕಚೇರಿಯಲ್ಲಿ ಹಮ್ಮಿಕೊಳ್ಳಲಾಗಿದ್ದ ಜಂಟಿ ಪತ್ರಿಕಾ ಗೋಷ್ಠಿಯಲ್ಲಿ ಮಾತನಾಡಿದ ಅವರು ಕಾರ್ಮಿಕರಿಗೆ ಸಾಮಾಜಿಕ ರಕ್ಷಣೆಯನ್ನು ನೀಡುವ ದೃಷ್ಟಿಯಲ್ಲಿ ಗರಿಷ್ಠ ಕಾರ್ಖಾನೆ ಉದ್ಯೋಗಿಗಳನ್ನು ಕಾಯ್ದೆಯಡಿ ತರುವ ಉದ್ದೇಶದಿಂದ ಕಾರ್ಮಿಕರ ರಾಜ್ಯ ವಿಮಾ ನಿಗಮವು (ಇಎಸ್‌ಐಸಿ) SPREE 2025 (Scheme for promotion of Registration of employers and employees ? ಉದ್ಯೋಗದಾತರು ಮತ್ತು ಉದ್ಯೋಗಿಗಳ ನೋಂದಣಿಯನ್ನು ಉತ್ತೇಜಿಸುವ ಯೋಜನೆ ? 2025) ಎಂಬ ನವೀಕೃತ ಯೋಜನೆಯನ್ನು ಜಾರಿಗೊಳಿಸಲಾಗಿದೆ. ಹಿಮಾಚಲ ಪ್ರದೇಶದ ಶಿಮ್ಲಾದಲ್ಲಿ ಮಾನ್ಯ ಕೇಂದ್ರ ಕಾರ್ಮಿಕ ಮತ್ತು ಉದ್ಯೋಗ ಹಾಗೂ ಯುವ ವ್ಯವಹಾರ ಮತ್ತು ಕ್ರೀಡಾ ಸಚಿವರಾದ ಡಾ. ಮನ್ಸುಖ್ ಮಾಂಡವೀಯ ಇವರ ಅಧ್ಯಕ್ಷತೆಯಲ್ಲಿ ನಡೆದ ಕಾರ್ಮಿಕರ ರಾಜ್ಯ ವಿಮಾ ನಿಗಮದ 196ನೇ ಸಭೆಯಲ್ಲಿ ಈ ಯೋಜನೆಯನ್ನು ಅನುಮೋದಿಸಲಾಗಿದೆ ಎಂದು ತಿಳಿಸಿದರು.

ವಿಶ್ವದ ಅತಿ ದೊಡ್ಡ ಸಾಮಾಜಿಕ ಸುರಕ್ಷಾ ಸಂಸ್ಥೆ ಕಾರ್ಮಿಕರ ರಾಜ್ಯ ವಿಮಾ ನಿಗಮವು 'ಕಾರ್ಮಿಕರ ರಾಜ್ಯ ವಿಮಾ ಕಾಯ್ದೆ 1948' ರ ಅಡಿಯಲ್ಲಿ ರಚಿಸಿದ ಭಾರತದ ಸಂಸತ್ತಿನಲ್ಲಿ ಅನುಮೋದನೆಗೊಂಡ ಸಾಮಾಜಿಕ ಭದ್ರತಾ ಕಾಯ್ದೆಯಾಗಿದ್ದು, ಇದರಡಿಯಲ್ಲಿ ನೋಂದಾಯಿಸಲಾದ ಕಾರ್ಮಿಕರಿಗೆ ಅನಾರೋಗ್ಯ, ಮಾತೃತ್ವ, ಉದ್ಯೋಗ ಸಂಬಂಧಿ ಅಪಘಾತದಿಂದ ಆದ ಗಾಯ, ಅಂಗವಿಕಲತೆ ಮತ್ತು ಮರಣದಂತಹ ಆಕಸ್ಮಿಕ ಸಂದರ್ಭಗಳಲ್ಲಿ ವೈದ್ಯಕೀಯ ಆರೈಕೆ ಮತ್ತು ನಗದು ಸೌಲಭ್ಯಗಳನ್ನು ಒದಗಿಸುತ್ತದೆ ಎಂದು ತಿಳಿಸಿದರು.

ಇ.ಎಸ್.ಐ ಯೋಜನೆಯು ಕರ್ನಾಟಕ ರಾಜ್ಯದ ಎಲ್ಲಾ 31 ಜಿಲ್ಲೆಗಳಲ್ಲಿ ಜಾರಿಗೆ ತರಲಾಗಿದ್ದು, ಒಟ್ಟು 35.00 ಲಕ್ಷ ವಿಮಾದಾರರು ಮತ್ತು 140 ಲಕ್ಷ ಕುಟುಂಬ ಸದಸ್ಯರುಗಳು ಈ ಯೋಜನೆಯ ಫಲಾನುಭವಿಗಳಾಗಿದ್ದಾರೆ. ಒಟ್ಟು 1.87 ಲಕ್ಷ ಉದ್ಯೋಗದಾತರು ಈ ಯೋಜನೆಯಡಿಯಲ್ಲಿ ನೋಂದಾಯಿಸಿಕೊಂಡಿದ್ದಾರೆ ಎಂದು ಮಾಹಿತಿ ನೀಡಿದರು.

ಕಾರ್ಮಿಕರ ರಾಜ್ಯ ವಿಮಾ ನಿಗಮದ 196ನೇ ಸಭೆಯಲ್ಲಿ ಇ.ಎಸ್.ಐ ಕಾಯ್ದೆಯ ಅನುಸರಣೆಯನ್ನು ಉತ್ತೇಜಿಸಲು 'ಕ್ಷಮಾದಾನ ಯೋಜನೆ 2025' ಎಂಬ ಯೋಜನೆಯನ್ನು ಪ್ರಾರಂಭಿಸಿದ್ದು, ಈ ಯೋಜನೆಯು 1ನೇ ಅಕ್ಟೋಬರ್ 2025 ರಿಂದ 30ನೇ ಸೆಪ್ಟೆಂಬರ್ 2026 ರವರೆಗೆ ಜಾರಿಯಲ್ಲಿದ್ದು, ಇದರಲ್ಲಿ ಉದ್ಯೋಗದಾತರು ಮತ್ತು ನಿಗಮದ ನಡುವಿನ ವ್ಯಾಜ್ಯಗಳನ್ನು ಪರಸ್ಪರ ಇತ್ಯರ್ಥಪಡಿಸಿ ಪರಿಹಾರವನ್ನು ಕಂಡುಕೊಳ್ಳಬಹುದಾಗಿದೆ. ವ್ಯಾಜ್ಯಗಳನ್ನು ಕಡಿಮೆ ಮಾಡುವ ಗುರಿಯನ್ನು ಇದು ಹೊಂದಿದ್ದು, ಸರಳೀಕೃತ ಸುಲಭ ವ್ಯವಹಾರವನ್ನು ಪ್ರೋತ್ಸಾಹಿಸುತ್ತದೆ ಎಂದು ತಿಳಿಸಿದರು.

ಕಾರ್ಮಿಕರ ರಾಜ್ಯ ವಿಮಾ ನಿಗಮದ ಸಹೋದರಿ ಸಂಸ್ಥೆಯಾದ ಕಾರ್ಮಿಕರ ಭವಿಷ್ಯ ನಿಧಿ ಸಂಘಟನೆ ಅಡಿಯಲ್ಲಿ (ಇ.ಪಿ.ಎಫ್.ಓ)- ಉದ್ಯೋಗ ಪ್ರೋತ್ಸಾಹಕ ಯೋಜನೆ (ಇ.ಎಲ್.ಐ) ಎಂಬ ನವೀನ ಯೋಜನೆಯನ್ನು ಭಾರತ ಸರ್ಕಾರವು ಇತ್ತೀಚೆಗೆ ಪರಿಚಯಿಸಿದ್ದು, ಈ ಯೋಜನೆಯಡಿಯಲ್ಲಿ, ಸಾಮಾಜಿಕ ಭದ್ರತೆಯ ಎಲ್ಲ ವಲಯಗಳಲ್ಲಿ, ವಿಶೇಷವಾಗಿ ಉತ್ಪಾದಕ ವಲಯದಲ್ಲಿ ಉದ್ಯೋಗ ಸೃಷ್ಟಿಯನ್ನು ಪ್ರೋತ್ಸಾಹಿಸುವ ನಿಟ್ಟಿನಲ್ಲಿ, ಮೊದಲಬಾರಿ ಮಾಸಿಕ ರೂ.15000/– ವರೆಗೆ ವೇತನ ಪಡೆದ ಉದ್ಯೋಗಿಗಳ ಉದ್ಯೋಗದಾತರು 2 ವರ್ಷಗಳವರೆಗೆ ಪ್ರೋತ್ಸಾಹದಾಯಕ 'ಇನ್ಸೆಂಟಿವ್' ಪಡೆಯಬಹುದು ಮತ್ತು ಉತ್ಪಾದನಾ ವಲಯದಲ್ಲಿ ಹೆಚ್ಚುವರಿ ಉದ್ಯೋಗವನ್ನು ಸೃಷ್ಟಿಸಿದಲ್ಲಿ ಮತ್ತೆ ಎರಡು ವರ್ಷಕ್ಕೆ ವಿಸ್ತರಿಸಲಾಗುವುದು. ಈ ಯೋಜನೆಯಡಿ ದೊರೆಯುವ ಸೌಲಭ್ಯವು 2025ನೇ ಆಗಸ್ಟ್ 01 ರಿಂದ 2027ನೇ ಜುಲೈ 31 ರ ಅವಧಿಯಲ್ಲಿ ಸೃಷ್ಟಿಯಾದ ಉದ್ಯೋಗಗಳಿಗೆ ಅನ್ವಯಿಸುತ್ತದೆ ಎಂದು ತಿಳಿಸಿದರು.

ಕಾರ್ಮಿಕರ ರಾಜ್ಯ ವಿಮಾ ನಿಗಮದ ಪೀಣ್ಯಾ ಉಪ ಪ್ರಾದೇಶಿಕ ಕಛೇರಿಯ ಜಂಟಿ ನಿರ್ದೇಶಕರಾದ ಅರಸಿ ಕಿಶೋರ್ ಅವರು ಮಾತನಾಡುತ್ತಾ, ಕಾರ್ಮಿಕರ ರಾಜ್ಯ ವಿಮಾ ನಿಗಮವು ಪ್ರಸ್ತುತ ಬೆಂಗಳೂರಿನ ಬಿನ್ನಿಪೇಟೆಯಲ್ಲಿ ಪ್ರಾದೇಶಿಕ ಕಛೇರಿಯನ್ನು ಹೊಂದಿದ್ದು, 06 ಉಪ ಪ್ರಾದೇಶಿಕ ಕಛೇರಿಗಳನ್ನು, ಬೆಂಗಳೂರು ದಕ್ಷಿಣದ ಬೊಮ್ಮಸಂದ್ರ, ಬೆಂಗಳೂರು ಉತ್ತರದ ಪೀಣ್ಯಾ, ಕಲ್ಬುರ್ಗಿ, ಹುಬ್ಬಳ್ಳಿ, ಮಂಗಳೂರು ಮತ್ತು ಮೈಸೂರಿನಲ್ಲಿ ಹೊಂದಿದೆ ಎಂದು ಮಾಹಿತಿ ನೀಡಿದರು.




ಉದ್ಯೋಗದಾತರು ಮತ್ತು ಉದ್ಯೋಗಿಗಳ ನೋಂದಣಿಯನ್ನು ಉತ್ತೇಜಿಸುವ ಯೋಜನೆ (SPREE) 2025 ಕಾರ್ಮಿಕರ ರಾಜ್ಯ ವಿಮಾ ನಿಗಮವು ಸಾಮಾಜಿಕ ಭದ್ರತಾ ವ್ಯಾಪ್ತಿಯನ್ನು ವಿಸ್ತರಿಸಲು ಅನುಮೋದಿಸಿದ ಒಂದು ವಿಶೇಷ ಉಪಕ್ರಮವಾಗಿದ್ದು, ಕಾಯ್ದೆಯ ನಿಬಂಧನೆಗಳಿಗೆ ಅನುಸಾರವಾಗಿ 10 ಮತ್ತು ಅದಕ್ಕಿಂತ ಹೆಚ್ಚು ಉದ್ಯೋಗಿಗಳನ್ನು ಹೊಂದಿರುವ ಎಲ್ಲಾ ಘಟಕಗಳು/ಸಂಸ್ಥೆಗಳು ತಮ್ಮ ಸ್ಥಾಪನೆಯ 15 ದಿನಗಳೊಳಗಾಗಿ ಕಾಯ್ದೆಯಡಿ ನೋಂದಾಯಿಸಿಕೊಳ್ಳಬೇಕು. ಯಾವುದೇ ಕಾರಣದಿಂದ ಉದ್ಯೋಗದಾತರು ತಮ್ಮ ಸಂಸ್ಥೆ/ಘಟಕವನ್ನು ಇನ್ನೂ ನೋಂದಾಯಿಸದಿದ್ದಲ್ಲಿ, 2025ನೇ ಜುಲೈ 1ರಿಂದ ರಿಂದ ಡಿಸೆಂಬರ್ 31 ಒಳಗೆ ನೋಂದಾಯಿಸಿಕೊಳ್ಳಬಹುದು. ಈ ಯೋಜನೆಯು 6 ತಿಂಗಳ ಅವಧಿಯವರೆಗೆ ಜಾರಿಯಲ್ಲಿರುತ್ತದೆ. ಗುತ್ತಿಗೆ ಹಾಗೂ ತಾತ್ಕಾಲಿಕ ಕಾರ್ಮಿಕರು ಸೇರಿದಂತೆ ಇಎಸ್ಐ ಅಡಿಯಲ್ಲಿ ಇನ್ನೂ ನೋಂದಾವಣೆಯಾಗದ ಉದ್ಯೋಗದಾತರು ಮತ್ತು ಉದ್ಯೋಗಿಗಳು ನೋಂದಾವಣಿ ಪೂರ್ವದ ಯಾವುದೇ ಪರಿಶೀಲನೆ ಅಥವಾ ಹಿಂದಿನ ಅವಧಿಯ ಯಾವುದೇ ಬಾಕಿಪಾವತಿಯ ಬೇಡಿಕೆ ಇಲ್ಲದೇ ನೋಂದಾಯಿಸಿಕೊಳ್ಳಲು ಇದು ಒಂದು ಬಾರಿಯ ಅವಕಾಶವನ್ನು ಒದಗಿಸುತ್ತದೆ ಎಂದು ತಿಳಿಸಿದರು.

SPREE 2025 ರ ಪ್ರಮುಖ ಪ್ರಯೋಜನಗಳು:

ಉದ್ಯೋಗದಾತರು ತಮ್ಮ ಘಟಕಗಳು ಮತ್ತು ಉದ್ಯೋಗಿಗಳನ್ನು ಇಎಸ್ಐಸಿ ಪೋರ್ಟಲ್, ಶ್ರಮ್ ಸುವಿಧಾ ಮತ್ತು ಎಂಸಿಎ (ESIC Portal, Shram suvidhaa, MCA) ಪೋರ್ಟಲ್ ಮೂಲಕ ಡಿಜಿಟಲ್ ರೂಪದಲ್ಲಿ ನೋಂದಾಯಿಸಿಕೊಳ್ಳಬಹುದು.

ಉದ್ಯೋಗದಾತರು ತಾವು ಘೋಷಿಸಿದ ದಿನಾಂಕದಿಂದ ನೋಂದಣಿಯನ್ನು ಪರಿಗಣಿಸಲಾಗುತ್ತದೆ. ನೋಂದಣಿಯ ಪೂರ್ವ ಅವಧಿಗೆ ಯಾವುದೇ ವಂತಿಗೆ ಮತ್ತು ಸೌಲಭ್ಯವು ಅನ್ವಯವಾಗುವುದಿಲ್ಲ. ನೋಂದಣಿಯ ಪೂರ್ವ ಅವಧಿಯ ಯಾವುದೇ ದಾಖಲೆಗಳ ಪರಿಶೀಲನೆ ಅಥವಾ ಬಾಕಿ ಪಾವತಿ ಬೇಡಿಕೆ ಇರುವುದಿಲ್ಲ.

ಈ ಯೋಜನೆಯು ಸ್ವಯಂಪ್ರೇರಿತ ಅನುಸರಣೆಯನ್ನು ಪ್ರೋತ್ಸಾಹಿಸಿ, ಹಿಂದಿನ ಅವಧಿಗೆ ದಂಡ ಪಾವತಿಸಬೇಕಾದ ಭಯವನ್ನು ಹೋಗಲಾಡಿಸಿ, ನೋಂದಾವಣೆಯ ಪ್ರಕ್ರಿಯೆಯನ್ನು ಸರಳೀಕರಿಸಲಾಗಿದೆ. ಎಸ್‌ಪಿಆರ್‌ಇಇ 2025 ನ್ನು ಪರಿಚಯಿಸುವ ಮೊದಲು ನಿಗದಿತ ಅವಧಿಯಲ್ಲಿ ನೋಂದಾವಣೆ ಮಾಡದಿದ್ದಲ್ಲಿ ಕಾನೂನು ಕ್ರಮ ಹಾಗೂ ಹಿಂದಿನ ಅವಧಿಯ ಬಾಕಿ ಪಾವತಿ ಬೇಡಿಕೆಗೆ ಕಾರಣವಾಗುತ್ತಿತ್ತು. SPREE 2025 ಈ ಅಡೆತಡೆಗಳನ್ನು ನಿವಾರಿಸಿ ನೋಂದಾವಣೆಯಿಂದ ಬಿಟ್ಟುಹೋದ ಘಟಕಗಳು ಮತ್ತು ಕಾರ್ಮಿಕರನ್ನು ಇಎಸ್ಐ ವ್ಯಾಪ್ತಿಯೊಳಗೆ ಸೇರಿಸಿ ಸಾಮಾಜಿಕ ರಕ್ಷಣೆಯನ್ನು ಒದಗಿಸುತ್ತದೆ ಎಂದು ತಿಳಿಸಿದರು.

ಬೊಮ್ಮಸಂದ್ರ ಉಪ ಪ್ರಾದೇಶಿಕ ಕಛೇರಿಯ ಜಂಟಿ ನಿರ್ದೇಶಕರಾದ ಶ್ರೀಮತಿ ಕವಿತ ಸೆಟ್ಟಿ ಅವರು ಮಾತನಾಡಿ ಎಸ್‌ಪಿಆರ್‌ಇಇ 2025 ರ ಪ್ರಾರಂಭವು ಸಾಮಾಜಿಕ ರಕ್ಷಣೆಯನ್ನು ಒದಗಿಸುವ ಮತ್ತು ದೊರಕಿಸುವ ನಿಟ್ಟಿನಲ್ಲಿ ಕಾರ್ಮಿಕರ ರಾಜ್ಯ ವಿಮಾ ನಿಗಮದ ಒಂದು ಪ್ರಗತಿಪರ ಹೆಜ್ಜೆಯಾಗಿದ್ದು, ಸರಳ ಮತ್ತು ಹಿಂದಿನ ಅವಧಿಯ ಬಾಕಿಪಾವತಿಯ ಬೇಡಿಕೆಯ ಬಾಧ್ಯತೆಯಿಲ್ಲದೆ ನೋಂದಾವಣೆಗೊಂಡು ಸುಲಭವಾಗಿ ಸಾಮಾಜಿಕ ಭದ್ರತೆಗೆ ಒಳಪಡುವ ಯೋಜನೆಯಾಗಿದೆ. ಈ ಯೋಜನೆಯು ಉದ್ಯೋಗದಾತರು ಕೇವಲ ತಮ್ಮ ಕಾರ್ಯಪಡೆಯ ಕ್ರಮಬದ್ಧಗೊಳಿಸುವಿಕೆಯನ್ನು ಪ್ರೋತ್ಸಾಹಿಸುವುದಲ್ಲದೆ, ಇನ್ನೂ ಹೆಚ್ಚಿನ ಕಾರ್ಮಿಕರನ್ನು ವಿಶೇಷವಾಗಿ ತಾತ್ಕಾಲಿಕ ಮತ್ತು ಗುತ್ತಿಗೆ ವಲಯದ ಕಾರ್ಮಿಕರು ಇಎಸ್ಐ ಕಾಯ್ದೆಯಡಿಯಲ್ಲಿ ದೊರೆಯುವ ಆರೋಗ್ಯ ರಕ್ಷಣೆ ಹಾಗೂ ಸಾಮಾಜಿಕ ಸೌಲಭ್ಯಗಳನ್ನು ಪಡೆಯುವುದನ್ನು ಉತ್ತೇಜಿಸುತ್ತದೆ. ಇದರೊಂದಿಗೆ ಇಎಸ್ಐಸಿಯು ಆರೋಗ್ಯ ರಕ್ಷಣೆ ಮತ್ತು ಸಾಮಾಜಿಕ ಭದ್ರತೆಯನ್ನು ಅಗತ್ಯವಿರುವವರಿಗೆ ತಲುಪಿಸುವ ತನ್ನ ಬದ್ಧತೆಯನ್ನು ಉಳಿಸಿಕೊಂಡು ಭಾರತದ ಕಾರ್ಮಿಕ ಕಲ್ಯಾಣ ಕೇಂದ್ರಿತ ದೃಷ್ಟಿಕೋನಕ್ಕೆ ಅನುಗುಣವಾಗಿದೆ ಎಂದು ಮಾಹಿತಿ ನೀಡಿದರು.

ಪತ್ರಿಕಾಗೋಷ್ಠಿಯಲ್ಲಿ, ಕಾರ್ಮಿಕರ ರಾಜ್ಯ ವಿಮಾ ನಿಗಮದ ಜಂಟಿ ನಿರ್ದೇಶಕರುಗಳಾದ, ಸುನಿಲ್ ಕುಮಾರ್ ಮೊಹಂತೋ, ಮನೀಷ್ ಗುಪ್ತ, ದರ್ಬರ ಸಿಂಗ್, ಉಪನಿರ್ದೇಶಕರು ಸಾರ್ವಜನಿಕ ಸಂಪರ್ಕ, ವಿನೋದ್ ಬಾರಕ್ವಾಲ್, ಕಾರ್ಯಪಾಲಕ ಅಭಿಯಂತರರು, ಉಪ ನಿರ್ದೇಶಕರುಗಳಾದ ಅಭಿಷೇಕ್ ಕುಮಾರ್ ಸಿಂಗ್, ಮಹೇಶ್ ಕುಮಾರ್ ಪಾಂಡೆ, ಸಂಗ್ ಪ್ರಿಯಾ ಆನಂದ್ ಹಾಗೂ ಇತರರು ಹಾಜರಿದ್ದರು.

ಮಾಸ್ತಮ್ಮ ವಾಣಿ
19 ಜುಲೈ 2025 ಶನಿವಾರ

# ಕಾರ್ಮಿಕರ ರಾಜ್ಯ ವಿಮಾ ನಿಗಮದಿಂದ ಸಾಮಾಜಿಕ ಭದ್ರತೆಯನ್ನು ವಿಸ್ತರಿಸಲು ಒಂದು ವಿಶೇಷ ಉಪಕ್ರಮ: ಮನೋಜ್ ಕುಮಾರ್



**ಬೆಂಗಳೂರು:** ಕಾರ್ಮಿಕ ರಾಜ್ಯ ವಿಮಾ ನಿಗಮದಿಂದ ಸಾಮಾಜಿಕ ಭದ್ರತಾ ವ್ಯಾಪ್ತಿಯನ್ನು ವಿಸ್ತರಿಸುವ ಸಲುವಾಗಿ ವಿಶೇಷ ಉಪಕ್ರಮವಾಗಿ, ಕಾರ್ಮಿಕರ ಕಲ್ಯಾಣಕ್ಕಾಗಿ ಖಿಕಿಖಿಇಇ ಯೋಜನೆಯನ್ನು ಜಾರಿಗೊಳಿಸಲಾಗಿದೆ ಎಂದು ಪ್ರಾದೇಶಿಕ ನಿರ್ದೇಶಕರು ಮನೋಜ್ ಕುಮಾರ್ ತಿಳಿಸಿದರು.

ಇಂದು ಬೆಂಗಳೂರಿನ ಕಾರ್ಮಿಕರ ರಾಜ್ಯ ವಿಮಾ ನಿಗಮದ ಪ್ರಾದೇಶಿಕ ಕಚೇರಿಯಲ್ಲಿ ಹಮ್ಮಿಕೊಳ್ಳಲಾಗಿದ್ದ ಜಂಟಿ ಪತ್ರಿಕಾ ಗೋಷ್ಠಿಯಲ್ಲಿ ಮಾತನಾಡಿದ ಅವರು ಕಾರ್ಮಿಕರಿಗೆ ಸಾಮಾಜಿಕ ರಕ್ಷಣೆಯನ್ನು ನೀಡುವ ದೃಷ್ಟಿಯಲ್ಲಿ ಗರಿಷ್ಠ ಕಾರ್ಖಾನೆ ಉದ್ಯೋಗಿಗಳನ್ನು ಕಾಯ್ದೆಯಡಿ ತರುವ ಉದ್ದೇಶದಿಂದ ಕಾರ್ಮಿಕರ ರಾಜ್ಯ ವಿಮಾ ನಿಗಮವು (ಇಎಸ್‌ಐಸಿ) SPREE 2025 (Scheme for promotion of Registration of employers and employees ಉದ್ಯೋಗದಾತರು ಮತ್ತು ಉದ್ಯೋಗಿಗಳ ನೋಂದಣಿಯನ್ನು ಉತ್ತೇಜಿಸುವ ಯೋಜನೆ 2025) ಎಂಬ ನವೀಕೃತ ಯೋಜನೆಯನ್ನು ಜಾರಿಗೊಳಿಸಲಾಗಿದೆ. ಹಿಮಾಚಲ ಪ್ರದೇಶದ ಶಿಮ್ಲಾದಲ್ಲಿ ಮಾನ್ಯ ಕೇಂದ್ರ ಕಾರ್ಮಿಕ ಮತ್ತು ಉದ್ಯೋಗ ಹಾಗೂ ಯುವ ವ್ಯವಹಾರ ಮತ್ತು ಕ್ರೀಡಾ ಸಚಿವರಾದ ಡಾ. ಮನ್ಸುಖ್ ಮಾಂಡವೀಯ ಇವರ ಅಧ್ಯಕ್ಷತೆಯಲ್ಲಿ ನಡೆದ ಕಾರ್ಮಿಕರ ರಾಜ್ಯ ವಿಮಾ ನಿಗಮದ 196ನೇ ಸಭೆಯಲ್ಲಿ ಈ ಯೋಜನೆಯನ್ನು ಅನುಮೋದಿಸಲಾಗಿದೆ ಎಂದು ತಿಳಿಸಿದರು.

ವಿಶ್ವದ ಅತಿ ದೊಡ್ಡ ಸಾಮಾಜಿಕ ಸುರಕ್ಷಾ ಸಂಸ್ಥೆ ಕಾರ್ಮಿಕರ ರಾಜ್ಯ ವಿಮಾ ನಿಗಮವು ಕಾರ್ಮಿಕರ ರಾಜ್ಯ ವಿಮಾ ಕಾಯ್ದೆ 1948 ರ ಅಡಿಯಲ್ಲಿ ರಚಿಸಿದ ಭಾರತದ ಸಂಸತ್ತಿನಲ್ಲಿ ಅನುಮೋದನೆಗೊಂಡ ಸಾಮಾಜಿಕ ಭದ್ರತಾ ಕಾಯ್ದೆಯಾಗಿದ್ದು, ಇದರಡಿಯಲ್ಲಿ ನೋಂದಾಯಿಸಲಾದ ಕಾರ್ಮಿಕರಿಗೆ ಅನಾರೋಗ್ಯ, ಮಾತೃತ್ವ, ಉದ್ಯೋಗ ಸಂಬಂಧಿ ಅಪಘಾತದಿಂದ ಆದ ಗಾಯ, ಅಂಗವಿಕಲತೆ ಮತ್ತು ಮರಣದಂತಹ ಆಕಸ್ಮಿಕ ಸಂದರ್ಭಗಳಲ್ಲಿ ವೈದ್ಯಕೀಯ ಆರೈಕೆ ಮತ್ತು ನಗದು ಸೌಲಭ್ಯಗಳನ್ನು ಒದಗಿಸುತ್ತದೆ ಎಂದು ತಿಳಿಸಿದರು.

ಇ.ಎಸ್.ಐ ಯೋಜನೆಯು ಕರ್ನಾಟಕ ರಾಜ್ಯದ ಎಲ್ಲಾ 31 ಜಿಲ್ಲೆಗಳಲ್ಲಿ ಜಾರಿಗೆ ತರಲಾಗಿದ್ದು, ಒಟ್ಟು 35.00 ಲಕ್ಷ ವಿಮಾದಾರರು ಮತ್ತು 140 ಲಕ್ಷ ಕುಟುಂಬ ಸದಸ್ಯರುಗಳು ಈ ಯೋಜನೆಯ ಫಲಾನುಭವಿಗಳಾಗಿದ್ದಾರೆ. ಒಟ್ಟು 1.87 ಲಕ್ಷ ಉದ್ಯೋಗದಾತರು ಈ ಯೋಜನೆಯಡಿಯಲ್ಲಿ ನೋಂದಾಯಿಸಿಕೊಂಡಿದ್ದಾರೆ ಎಂದು ಮಾಹಿತಿ ನೀಡಿದರು.

ಕಾರ್ಮಿಕರ ರಾಜ್ಯ ವಿಮಾ ನಿಗಮದ 196ನೇ ಸಭೆಯಲ್ಲಿ ಇ.ಎಸ್.ಐ ಕಾಯ್ದೆಯ ಅನುಸರಣೆಯನ್ನು ಉತ್ತೇಜಿಸಲು ಕ್ಷಮಾದಾನ ಯೋಜನೆ 2025 ಎಂಬ ಯೋಜನೆಯನ್ನು ಪ್ರಾರಂಭಿಸಿದ್ದು, ಈ ಯೋಜನೆಯು 1ನೇ ಅಕ್ಟೋಬರ್ 2025 ರಿಂದ 30ನೇ ಸೆಪ್ಟೆಂಬರ್ 2026 ರವರೆಗೆ ಜಾರಿಯಲ್ಲಿದ್ದು, ಇದರಲ್ಲಿ ಉದ್ಯೋಗದಾತರು ಮತ್ತು ನಿಗಮದ ನಡುವಿನ ವ್ಯಾಜ್ಯಗಳನ್ನು ಪರಸ್ಪರ ಇತ್ಯರ್ಥಪಡಿಸಿ ಪರಿಹಾರವನ್ನು ಕಂಡುಕೊಳ್ಳಬಹುದಾಗಿದೆ. ವ್ಯಾಜ್ಯಗಳನ್ನು ಕಡಿಮೆ ಮಾಡುವ ಗುರಿಯನ್ನು ಇದು ಹೊಂದಿದ್ದು, ಸರಳೀಕೃತ ಸರಾಗ ವ್ಯವಹಾರವನ್ನು ಪ್ರೊತ್ಸಾಹಿಸುತ್ತದೆ ಎಂದು ತಿಳಿಸಿದರು.

ಕಾರ್ಮಿಕರ ರಾಜ್ಯ ವಿಮಾ ನಿಗಮದ ಸಹೋದರಿ ಸಂಸ್ಥೆಯಾದ ಕಾರ್ಮಿಕರ ಭವಿಷ್ಯ ನಿಧಿ ಸಂಘಟನೆ ಅಡಿಯಲ್ಲಿ (ಇ.ಪಿ.ಎಫ್.ಓ)- ಉದ್ಯೋಗ ಪ್ರೋರೀತ್ಸಾಹಕ ಯೋಜನೆ (ಇ.ಎಲ್.ಐ) ಎಂಬ ನವೀನ ಯೋಜನೆಯನ್ನು ಭಾರತ ಸರ್ಕಾರವು ಇತ್ತೀಚೆಗೆ ಪರಿಚಯಿಸಿದ್ದು, ಈ ಯೋಜನೆಯಡಿಯಲ್ಲಿ, ಸಾಮಾಜಿಕ ಭದ್ರತೆಯ ಎಲ್ಲ ವಲಯಗಳಲ್ಲಿ, ವಿಶೇಷವಾಗಿ ಉತ್ಪಾದಕ ವಲಯದಲ್ಲಿ ಉದ್ಯೋಗ ಸೃಷ್ಟಿಯನ್ನು ಪ್ರೋತ್ಸಾಹಿಸುವ ನಿಟ್ಟಿನಲ್ಲಿ, ಮೊದಲಬಾರಿ ಮಾಸಿಕ ರೂ.15000/- ವರೆಗೆ ವೇತನ ಪಡೆದ ಉದ್ಯೋಗಿಗಳ ಉದ್ಯೋಗದಾತರು 2 ವರ್ಷಗಳವರೆಗೆ ಪ್ರೋತ್ಸಾಹದಾಯಕ ಇನ್ಸೆಂಟಿವ್ ಪಡೆಯಬಹುದು ಮತ್ತು ಉತ್ಪಾದನಾ ವಲಯದಲ್ಲಿ ಹೆಚ್ಚುವರಿ ಉದ್ಯೋಗವನ್ನು ಸೃಷ್ಟಿಸಿದಲ್ಲಿ ಮತ್ತೆ ಎರಡು ವರ್ಷಕ್ಕೆ ವಿಸ್ತರಿಸಲಾಗುವುದು. ಈ ಯೋಜನೆಯಡಿ ದೊರೆಯುವ ಸೌಲಭ್ಯವು 2025ನೇ ಆಗಸ್ಟ್ 01 ರಿಂದ 2027ನೇ ಜುಲೈ 31 ರ ಅವಧಿಯಲ್ಲಿ ಸೃಷಿಯಾದ ಉದ್ಯೋಗಗಳಿಗೆ ಅನ್ವಯಿಸುತ್ತದೆ ಎಂದು ತಿಳಿಸಿದರು.

ಕಾರ್ಮಿಕರ ರಾಜ್ಯ ವಿಮಾ ನಿಗಮದ ಪೀಣ್ಯಾ ಉಪ ಪ್ರಾದೇಶಿಕ ಕಛೇರಿಯ ಜಂಟಿ ನಿರ್ದೇಶಕರಾದ ಅರಸರ ಕಿಶೋರ್ ಅವರು ಮಾತನಾಡುತ್ತಾ, ಕಾರ್ಮಿಕರ ರಾಜ್ಯ ವಿಮಾ ನಿಗಮವು ಪ್ರಸ್ತುತ ಬೆಂಗಳೂರಿನ ಬಿನ್ನಿಪೇಟೆಯಲ್ಲಿ ಪ್ರಾದೇಶಿಕ ಕಛೇರಿಯನ್ನು ಹೊಂದಿದ್ದು, 06 ಉಪ ಪ್ರಾದೇಶಿಕ ಕಛೇರಿಗಳನ್ನು ಬೆಂಗಳೂರು ದಕ್ಷಿಣದ ಬೊಮ್ಮಸಂದ್ರ, ಬೆಂಗಳೂರು ಉತ್ತರದ ಪೀಣ್ಯಾ, ಕಲ್ಬುರ್ಗಿ, ಹುಬ್ಬಳ್ಳಿ, ಮಂಗಳೂರು ಮತ್ತು ಮೈಸೂರಿನಲ್ಲಿ ಹೊಂದಿದೆ ಎಂದು ಮಾಹಿತಿ ನೀಡಿದರು.

ಉದ್ಯೋಗದಾತರು ಮತ್ತು ಉದ್ಯೋಗಿಗಳ ನೋಂದಣಿಯನ್ನು ಉತ್ತೇಜಿಸುವ ಯೋಜನೆ (SPREE) 2025 ಕಾರ್ಮಿಕರ ರಾಜ್ಯ ವಿಮಾ ನಿಗಮವು ಸಾಮಾಜಿಕ ಭದ್ರತಾ ವ್ಯಾಪ್ತಿಯನ್ನು ವಿಸ್ತರಿಸಲು ಅನುಮೋದಿಸಿದ ಒಂದು ವಿಶೇಷ ಉಪಕ್ರಮವಾಗಿದ್ದು, ಕಾಯ್ದೆಯ ನಿಬಂಧನೆಗಳಿಗೆ ಅನುಸಾರವಾಗಿ 10 ಮತ್ತು ಅದಕ್ಕಿಂತ ಹೆಚ್ಚು ಉದ್ಯೋಗಿಗಳನ್ನು ಹೊಂದಿರುವ ಎಲ್ಲಾ ಘಟಕಗಳು/ಸಂಸ್ಥೆಗಳು ತಮ್ಮ ಸ್ಥಾಪನೆಯ 15 ದಿನಗಳೊಳಗಾಗಿ ಕಾಯ್ದೆಯಡಿ ನೋಂದಾಯಿಸಿಕೊಳ್ಳಬೇಕು. ಯಾವುದೇ ಕಾರಣದಿಂದ ಉದ್ಯೋಗದಾತರು ತಮ್ಮ ಸಂಸ್ಥೆ/ ಘಟಕವನ್ನು ಇನ್ನೂ ನೋಂದಾಯಿಸದಿದ್ದಲ್ಲಿ, 2025ನೇ ಜುಲೈ 1ರಿಂದ ರಿಂದ ಡಿಸೆಂಬರ್ 31 ಒಳಗೆ ನೋಂದಾಯಿಸಿಕೊಳ್ಳಬಹದು. ಈ ಯೋಜನೆಯು 6 ತಿಂಗಳ ಅವಧಿಯ ವರೆಗೆ ಜಾರಿಯಲ್ಲಿರುತ್ತದೆ. ಗುತ್ತಿಗೆ ಹಾಗೂ ತಾತ್ಕಾಲಿಕ ಕಾರ್ಮಿಕರು ಸೇರಿದಂತೆ ಇಎಸ್‌ಐತ ಅಡಿಯಲ್ಲಿ ಇನ್ನೂ ನೋಂದಾವಣೆಯಾಗದ ಉದ್ಯೋಗದಾತರು ಮತ್ತು ಉದ್ಯೋಗಿಗಳು ನೋಂದಾವಣೆ ಪೂರ್ವದ ಯಾವುದೇ ಪರಿಶೀಲನೆ ಅಥವಾ ಹಿಂದಿನ ಅವಧಿಯ ಯಾವುದೇ ಬಾಕಿಪಾವತಿಯ ಬೇಡಿಕೆ ಇಲ್ಲದೇ ನೋಂದಾಯಿಸಿಕೊಳ್ಳಲು ಇದು ಒಂದು ಬಾರಿಯ ಅವಕಾಶವನ್ನು ಒದಗಿಸುತ್ತದೆ ಎಂದು ತಿಳಿಸಿದರು.

**SPREE 2025 ರ ಪ್ರಮುಖ ಪ್ರಯೋಜನಗಳು:**

ಉದ್ಯೋಗದಾತರು ತಮ್ಮ ಘಟಕಗಳು ಮತ್ತು ಉದ್ಯೋಗಿಗಳನ್ನು ಇಎಸ್‌ಐಸಿ ಪೋರ್ಟಲ್, ಶ್ರಮ್ ಸುವಿಧಾ ಮತ್ತು ಎಂಸಿಎ (ESIC Portal, Shram suvidhaa, MCA) ಪೋರ್ಟಲ್ ಮೂಲಕ ಡಿಜಿಟಲ್ ರೂಪದಲ್ಲಿ ನೋಂದಾಯಿಸಿಕೊಳ್ಳಬಹುದು.

ಉದ್ಯೋಗದಾತರು ತಾವು ಘೋಷಿಸಿದ ದಿನಾಂಕದಿಂದ ನೋಂದಣಿಯನ್ನು ಪರಿಗಣಿಸಲಾಗುತ್ತದೆ. ನೋಂದಣಿಯ ಪೂರ್ವ ಅವಧಿಗೆ ಯಾವುದೇ ವಂತಿಗೆ ಮತ್ತು ಸೌಲಭ್ಯವು ಅನ್ವಯವಾಗುವುದಿಲ್ಲ. ನೋಂದಣಿಯ ಪೂರ್ವ ಅವಧಿಯ ಯಾವುದೇ ದಾಖಲೆಗಳ ಪರಿಶೀಲನೆ ಅಥವಾ ಬಾಕಿ ಪಾವತಿ ಬೇಡಿಕೆ ಇರುವುದಿಲ್ಲ.

ಈ ಯೋಜನೆಯು ಸ್ವಯಂಪ್ರೇರಿತ ಅನುಸರಣೆಯನ್ನು ಪ್ರೋತ್ಸಾಹಿಸಿ, ಹಿಂದಿನ ಅವಧಿಗೆ ದಂಡ ಪಾವತಿಸಬೇಕಾದ ಭಯವನ್ನು ಹೋಗಲಾಡಿಸಿ, ನೋಂದಾವಣೆಯ ಪ್ರಕ್ರಿಯೆಯನ್ನು ಸರಳೀಕರಿಸಲಾಗಿದೆ. SPREE 2025 ನ್ನು ಪರಿಚಯಿಸುವ ಮೊದಲು ನಿಗಧಿತ ಅವಧಿಯಲ್ಲಿ ನೋಂದಾವಣೆ ಮಾಡದಿದ್ದಲ್ಲಿ ಕಾನೂನು ಕ್ರಮ ಹಾಗೂ ಹಿಂದಿನ ಅವಧಿಯ ಬಾಕಿ ಪಾವತಿ ಬೇಡಿಕೆಗೆ ಕಾರಣವಾಗುತ್ತಿತ್ತು, ಖಿಕಿಖಿಇಇ 2025 ಈ ಅಡೆತಡೆಗಳನ್ನು ನಿವಾರಿಸಿ ನೋಂದಾವಣೆಯಿಂದ ಬಿಟ್ಟುಹೋದ ಘಟಕಗಳು ಮತ್ತು ಕಾರ್ಮಿಕರನ್ನು ಇಎಸ್‌ಐ ವ್ಯಾಪ್ತಿಯೊಳಗೆ ಸೇರಿಸಿ ಸಾಮಾಜಿಕ ರಕ್ಷಣೆಯನ್ನು ಒದಗಿಸುತ್ತದೆ ಎಂದು ತಿಳಿಸಿದರು.

ಬೊಮ್ಮಸಂದ್ರ ಉಪ ಪ್ರಾದೇಶಿಕ ಕಛೇರಿಯ ಜಂಟಿ ನಿರ್ದೇಶಕರಾದ ಶ್ರೀಮತಿ ಕಣಿತ ಸೆಲ್ವಿ, ಅವರು ಮಾತನಾಡಿ ಖಿಕಿಖಿಇಇ 2025 ರ ಪ್ರಾರಂಭವು ಸಾಮಾಜಿಕ ರಕ್ಷಣೆಯನ್ನು ಒದಗಿಸುವ ಮತ್ತು ದೊರಕಿಸುವ ನಿಟ್ಟಿನಲ್ಲಿ ಕಾರ್ಮಿಕರ ರಾಜ್ಯ ವಿಮಾ ನಿಗಮದ ಒಂದು ಪ್ರಗತಿಪರ ಹೆಜ್ಜೆಯಾಗಿದ್ದು, ಸರಳ ಮತ್ತು ಹಿಂದಿನ ಅವಧಿಯ ಬಾಕಿಪಾವತಿಯ ಬೇಡಿಕೆಯ ಭಾಧ್ಯತೆಯಿಲ್ಲದೆ ನೋಂದಾವಣೆಗೊಂಡು ಸುಲಭವಾಗಿ ಸಾಮಾಜಿಕ ಭದ್ರತೆಗೆ ಒಳಪಡುವ ಯೋಜನೆಯಾಗಿದೆ. ಈ ಯೋಜನೆಯು ಉದ್ಯೋಗದಾತರು ಕೇವಲ ತಮ್ಮ ಕಾರ್ಯಪಡೆಯ ಕ್ರಮಬದ್ಧಗೊಳಿಸುವಿಕೆಯನ್ನು ಪ್ರೋತ್ಸಾಹಿಸುವುದಲ್ಲದೆ, ಇನ್ನೂ ಹೆಚ್ಚಿನ ಕಾರ್ಮಿಕರನ್ನು ವಿಶೇಷವಾಗಿ ತಾತ್ಕಾಲಿಕ ಮತ್ತು ಗುತ್ತಿಗೆ ವಲಯದ ಕಾರ್ಮಿಕರು ಇಎಸ್‌ಐ ಕಾಯ್ದೆಯಡಿಯಲ್ಲಿ ದೊರೆಯುವ ಆರೋಗ್ಯ ರಕ್ಷಣೆ ಹಾಗೂ ಸಾಮಾಜಿಕ ಸೌಲಭ್ಯಗಳನ್ನು ಪಡೆಯುವುದನ್ನು ಉತ್ತೇಜಿಸುತ್ತದೆ. ಇದರೊಂದಿಗೆ ಇಎಸ್‌ಐಯುಸಿಯು ಆರೋಗ್ಯ ರಕ್ಷಣೆ ಮತ್ತು ಸಾಮಾಜಿಕ ಭದ್ರತೆಯನ್ನು ಅಗತ್ಯವಿರುವವರಿಗೆ ತಲುಪಿಸುವ ತನ್ನ ಬದ್ಧತೆಯನ್ನು ಉಳಿಸಿಕೊಂಡು ಭಾರತದ ಕಾರ್ಮಿಕ ಕಲ್ಯಾಣ ಕೇಂದ್ರಿತ ದೃಷ್ಟಿಕೋನಕ್ಕೆ ಅನುಗುಣವಾಗಿದೆ ಎಂದು ಮಾಹಿತಿ ನೀಡಿದರು.

ಪತ್ರಿಕಾಗೋಷ್ಠಿಯಲ್ಲಿ, ಕಾರ್ಮಿಕರ ರಾಜ್ಯ ವಿಮಾ ನಿಗಮದ ಜಂಟಿ ನಿರ್ದೇಶಕರುಗಳಾದ, ಸುನಿಲ್ ಕುಮಾರ್ ಮೆಹತೋ, ಮನೀಷ್ ಗುಪ್ತ, ದರ್ಬರಾ ಸಿಂಗ್, ಉಪನಿರ್ದೇಶಕರು ಸಾರ್ವಜನಿಕ ಸಂಪರ್ಕ, ವಿನೋದ್ ಖಾರಕ್ವಾಲ್, ಕಾರ್ಯಪಾಲಕ ಅಭಿಯಂತರರು, ಉಪ ನಿರ್ದೇಶಕರುಗಳಾದ ಅಭಿಷೇಕ್ ಕುಮಾರ್ ಸಿಂಗ್, ಮಹೇಶ್ ಕುಮಾರ್ ಪಾಂಡೆ, ಸಂಗ್ ಪ್ರಿಯಾ ಆನಂದ್ ಹಾಗೂ ಇತರರು ಹಾಜರಿದ್ದರು.

# ಕಾರ್ಮಿಕರ ರಾಜ್ಯ ವಿಮಾ ನಿಗಮದಿಂದ ಸಾಮಾಜಿಕ ಭದ್ರತಾ ವ್ಯಾಪ್ತಿಯನ್ನು ವಿಸ್ತರಿಸಲು ಒಂದು ವಿಶೇಷ ಉಪಕ್ರಮ : ಮನೋಜ್ ಕುಮಾರ್

**ಬೆಂಗಳೂರು :** ಕಾರ್ಮಿಕ ರಾಜ್ಯ ವಿಮಾ ನಿಗಮದಿಂದ ಸಾಮಾಜಿಕ ಭದ್ರತಾ ವ್ಯಾಪ್ತಿಯನ್ನು ವಿಸ್ತರಿಸುವ ಸಲುವಾಗಿ ವಿಶೇಷ ಉಪಕ್ರಮವಾಗಿ, ಕಾರ್ಮಿಕರ ಕಲ್ಯಾಣಕ್ಕಾಗಿ ಖಿಕಿಖಿಇಇ ಯೋಜನೆಯನ್ನು ಜಾರಿಗೊಳಿಸಲಾಗಿದೆ ಎಂದು ಪ್ರಾದೇಶಿಕ ನಿರ್ದೇಶಕರು ಮನೋಜ್ ಕುಮಾರ್ ತಿಳಿಸಿದರು.

ಬೆಂಗಳೂರಿನ ಕಾರ್ಮಿಕರ ರಾಜ್ಯ ವಿಮಾ ನಿಗಮದ ಪ್ರಾದೇಶಿಕ ಕಚೇರಿಯಲ್ಲಿ ಹಮ್ಮಿಕೊಳ್ಳಲಾಗಿದ್ದ ಜಂಟಿ ಪತ್ರಿಕಾ ಗೋಷ್ಠಿಯಲ್ಲಿ ಮಾತನಾಡಿದ ಅವರು ಕಾರ್ಮಿಕರಿಗೆ ಸಾಮಾಜಿಕ ರಕ್ಷಣೆಯನ್ನು ನೀಡುವ ದೃಷ್ಟಿಯಲ್ಲಿ ಗರಿಷ್ಠ ಕಾರ್ಖಾನೆ ಉದ್ಯೋಗಿಗಳನ್ನು ಕಾಯ್ದೆಯಡಿ ತರುವ ಉದ್ದೇಶದಿಂದ ಕಾರ್ಮಿಕರ ರಾಜ್ಯ ವಿಮಾ ನಿಗಮವು (ಇಎಸ್‌ಐಸಿ) SPREE 2025 (Scheme for promotion of Registration of employers and employees ? ಉದ್ಯೋಗದಾತರು ಮತ್ತು ಉದ್ಯೋಗಿಗಳ ನೋಂದಣಿಯನ್ನು ಉತ್ತೇಜಿಸುವ ಯೋಜನೆ ? 2025) ಎಂಬ ನವೀಕೃತ ಯೋಜನೆಯನ್ನು ಜಾರಿಗೊಳಿಸಲಾಗಿದೆ. ಹಿಮಾಚಲ ಪ್ರದೇಶದ ಶಿಮ್ಲಾದಲ್ಲಿ ಮಾನ್ಯ ಕೇಂದ್ರ ಕಾರ್ಮಿಕ ಮತ್ತು ಉದ್ಯೋಗ ಹಾಗೂ ಯುವ ವ್ಯವಹಾರ ಮತ್ತು ಕ್ರೀಡಾ ಸಚಿವರಾದ ಡಾ. ಮನ್ಸುಖ್ ಮಾಂಡವೀಯ ಇವರ ಅಧ್ಯಕ್ಷತೆಯಲ್ಲಿ ನಡೆದ ಕಾರ್ಮಿಕರ ರಾಜ್ಯ ವಿಮಾ ನಿಗಮದ 196ನೇ ಸಭೆಯಲ್ಲಿ ಈ ಯೋಜನೆಯನ್ನು ಅನುಮೋದಿಸಲಾಗಿದೆ ಎಂದು ತಿಳಿಸಿದರು.

ವಿಶ್ವದ ಅತಿ ದೊಡ್ಡ ಸಾಮಾಜಿಕ ಸುರಕ್ಷಾ ಸಂಸ್ಥೆ ಕಾರ್ಮಿಕರ ರಾಜ್ಯ ವಿಮಾ ನಿಗಮವು 'ಕಾರ್ಮಿಕರ ರಾಜ್ಯ ವಿಮಾ ಕಾಯ್ದೆ 1948' ರ ಅಡಿಯಲ್ಲಿ ರಚಿಸಿದ ಭಾರತದ ಸಂಸತ್ತಿನಲ್ಲಿ ಅನುಮೋದನೆಗೊಂಡ ಸಾಮಾಜಿಕ ಭದ್ರತಾ ಕಾಯ್ದೆಯಾಗಿದ್ದು, ಇದರಡಿಯಲ್ಲಿ ನೋಂದಾಯಿಸಲಾದ ಕಾರ್ಮಿಕರಿಗೆ ಅನಾರೋಗ್ಯ, ಮಾತೃತ್ವ, ಉದ್ಯೋಗ ಸಂಬಂಧಿ ಅಪಘಾತದಿಂದ ಆದ ಗಾಯ, ಅಂಗವಿಕಲತೆ ಮತ್ತು ಮರಣದಂತಹ ಆಕಸ್ಮಿಕ ಸಂದರ್ಭಗಳಲ್ಲಿ ವೈದ್ಯಕೀಯ ಆರ್ಥಿಕ ಮತ್ತು ನಗದು ಸೌಲಭ್ಯಗಳನ್ನು ಒದಗಿಸುತ್ತದೆ ಎಂದು ತಿಳಿಸಿದರು.

ಇ.ಎಸ್.ಐ ಯೋಜನೆಯು ಕರ್ನಾಟಕ ರಾಜ್ಯದ ಎಲ್ಲಾ 31 ಜಿಲ್ಲೆಗಳಲ್ಲಿ ಜಾರಿಗೆ ತರಲಾಗಿದ್ದು, ಒಟ್ಟು 35.00 ಲಕ್ಷ ವಿಮಾದಾರರು ಮತ್ತು 140 ಲಕ್ಷ ಕುಟುಂಬ ಸದಸ್ಯರುಗಳು ಈ ಯೋಜನೆಯ ಫಲಾನುಭವಿಗಳಾಗಿದ್ದಾರೆ. ಒಟ್ಟು 1.87 ಲಕ್ಷ ಉದ್ಯೋಗದಾತರು ಈ ಯೋಜನೆಯಡಿಯಲ್ಲಿ ನೋಂದಾಯಿಸಿಕೊಂಡಿದ್ದಾರೆ ಎಂದು ಮಾಹಿತಿ ನೀಡಿದರು.

ಕಾರ್ಮಿಕರ ರಾಜ್ಯ ವಿಮಾ ನಿಗಮದ 196ನೇ ಸಭೆಯಲ್ಲಿ ಇ.ಎಸ್.ಐ ಕಾಯ್ದೆಯ ಅನುಸರಣೆಯನ್ನು ಉತ್ತೇಜಿಸಲು 'ಕ್ಷಮಾದಾನ ಯೋಜನೆ 2025' ಎಂಬ ಯೋಜನೆಯನ್ನು ಪ್ರಾರಂಭಿಸಿದ್ದು, ಈ ಯೋಜನೆಯು 1ನೇ ಅಕ್ಟೋಬರ್ 2025 ರಿಂದ 30ನೇ ಸೆಪ್ಟೆಂಬರ್ 2026 ರವರೆಗೆ ಜಾರಿಯಲ್ಲಿದ್ದು, ಇದರಲ್ಲಿ ಉದ್ಯೋಗದಾತರು ಮತ್ತು ನಿಗಮದ ನಡುವಿನ ವ್ಯಾಜ್ಯಗಳನ್ನು ಪರಸ್ಪರ ಚರ್ಚಿಸಿ ಪರಿಹಾರವನ್ನು ಕಂಡುಕೊಳ್ಳಬಹುದಾಗಿದೆ. ವ್ಯಾಜ್ಯಗಳನ್ನು ಕಡಿಮೆ ಮಾಡುವ ಗುರಿಯನ್ನು ಇದು ಹೊಂದಿದ್ದು, ಸರಳೀಕೃತ ಸರಾಗ ವ್ಯವಹಾರವನ್ನು ಪ್ರೋತ್ಸಾಹಿಸುತ್ತದೆ ಎಂದು ತಿಳಿಸಿದರು.

ಕಾರ್ಮಿಕರ ರಾಜ್ಯ ವಿಮಾ ನಿಗಮದ ಸಹೋದರಿ ಸಂಸ್ಥೆಯಾದ ಕಾರ್ಮಿಕರ ಭವಿಷ್ಯ ನಿಧಿ ಸಂಘಟನೆ ಅಡಿಯಲ್ಲಿ (ಇ.ಪಿ.ಎಫ್.ಓ)- ಉದ್ಯೋಗ ಪ್ರೋತ್ಸಾಹಕ ಯೋಜನೆ (ಇ.ಎಲ್.ಐ) ಎಂಬ ನವೀನ ಯೋಜನೆಯನ್ನು ಭಾರತ ಸರ್ಕಾರವು ಇತ್ತೀಚೆಗೆ ಪರಿಚಯಿಸಿದ್ದು, ಈ ಯೋಜನೆಯಡಿಯಲ್ಲಿ, ಸಾಮಾಜಿಕ ಭದ್ರತೆಯ ಎಲ್ಲ ವಲಯಗಳಲ್ಲಿ, ವಿಶೇಷವಾಗಿ ಉತ್ಪಾದಕ ವಲಯದಲ್ಲಿ ಉದ್ಯೋಗ ಸೃಷ್ಟಿಯನ್ನು ಪ್ರೋತ್ಸಾಹಿಸುವ ನಿಟ್ಟಿನಲ್ಲಿ, ಮೊದಲಬಾರಿ ಮಾಸಿಕ ರೂ.15000/– ವರೆಗೆ ವೇತನ ಪಡೆದ ಉದ್ಯೋಗಿಗಳ ಉದ್ಯೋಗದಾತರು 2 ವರ್ಷಗಳವರೆಗೆ




ಪ್ರೋತ್ಸಾಹದಾಯಕ ಇನ್ಸೆಂಟಿವ್ ಪಡೆಯಬಹುದು ಮತ್ತು ಉತ್ಪಾದನಾ ವಲಯದಲ್ಲಿ ಹೆಚ್ಚುವರಿ ಉದ್ಯೋಗವನ್ನು ಸೃಷ್ಟಿಸಿದಲ್ಲಿ ಮತ್ತೆ ಎರಡು ವರ್ಷಕ್ಕೆ ವಿಸ್ತರಿಸಲಾಗುವುದು. ಈ ಯೋಜನೆಯಡಿ ದೊರೆಯುವ ಸೌಲಭ್ಯವು 2025ನೇ ಆಗಸ್ಟ್ 01 ರಿಂದ 2027ನೇ ಜುಲೈ 31 ರ ಅವಧಿಯಲ್ಲಿ ಸೃಷಿಯಾದ ಉದ್ಯೋಗಗಳಿಗೆ ಅನ್ವಯಿಸುತ್ತದೆ ಎಂದು ತಿಳಿಸಿದರು.

ಕಾರ್ಮಿಕರ ರಾಜ್ಯ ವಿಮಾ ನಿಗಮದ ಪೀಣ್ಯ ಉಪ ಪ್ರಾದೇಶಿಕ ಕಛೇರಿಯ ಜಂಟಿ ನಿರ್ದೇಶಕರಾದ ಅರಸರ ಕಿಶೋರ್ ಅವರು ಮಾತನಾಡುತ್ತಾ, ಕಾರ್ಮಿಕರ ರಾಜ್ಯ ವಿಮಾ ನಿಗಮವು ಪ್ರಸ್ತುತ ಬೆಂಗಳೂರಿನ ಬಿನ್ನಿಪೇಟೆಯಲ್ಲಿ ಪ್ರಾದೇಶಿಕ ಕಛೇರಿಯನ್ನು ಹೊಂದಿದ್ದು, 06 ಉಪ ಪ್ರಾದೇಶಿಕ ಕಛೇರಿಗಳನ್ನು ಬೆಂಗಳೂರು ದಕ್ಷಿಣದ ಬೊಮ್ಮಸಂದ್ರ, ಬೆಂಗಳೂರು ಉತ್ತರದ ಪೀಣ್ಯ, ಕಲ್ಬುರ್ಗಿ, ಹುಬ್ಬಳ್ಳಿ, ಮಂಗಳೂರು ಮತ್ತು ಮೈಸೂರಿನಲ್ಲಿ ಹೊಂದಿದೆ ಎಂದು ಮಾಹಿತಿ ನೀಡಿದರು.

ಉದ್ಯೋಗದಾತರು ಮತ್ತು ಉದ್ಯೋಗಿಗಳ ನೋಂದಣಿಯನ್ನು ಉತ್ತೇಜಿಸುವ ಯೋಜನೆ (SPREE) 2025 ಕಾರ್ಮಿಕರ ರಾಜ್ಯ ವಿಮಾ ನಿಗಮವು ಸಾಮಾಜಿಕ ಭದ್ರತಾ ವ್ಯಾಪ್ತಿಯನ್ನು ವಿಸ್ತರಿಸಲು ಅನುಮೋದಿಸಿದ ಒಂದು ವಿಶೇಷ ಉಪಕ್ರಮವಾಗಿದ್ದು, ಕಾಯ್ದೆಯ ನಿಬಂಧನೆಗಳಿಗೆ ಅನುಸಾರವಾಗಿ 10 ಮತ್ತು ಅದಕ್ಕಿಂತ ಹೆಚ್ಚು ಉದ್ಯೋಗಿಗಳನ್ನು ಹೊಂದಿರುವ ಎಲ್ಲಾ ಘಟಕಗಳು/ಸಂಸ್ಥೆಗಳು ತಮ್ಮ ಸ್ಥಾಪನೆಯ 15 ದಿನಗಳೊಳಗಾಗಿ ಕಾಯ್ದೆಯಡಿ ನೋಂದಾಯಿಸಿಕೊಳ್ಳಬೇಕು. ಯಾವುದೇ ಕಾರಣದಿಂದ ಉದ್ಯೋಗದಾತರು ತಮ್ಮ ಸಂಸ್ಥೆ/ಘಟಕವನ್ನು ಇನ್ನೂ ನೋಂದಾಯಿಸದಿದ್ದಲ್ಲಿ, 2025ನೇ ಜುಲೈ 1ರಿಂದ ರಿಂದ ಡಿಸೆಂಬರ್ 31 ಒಳಗೆ ನೋಂದಾಯಿಸಿಕೊಳ್ಳಬಹುದು. ಈ ಯೋಜನೆಯು 6 ತಿಂಗಳ ಅವಧಿಯ ವರೆಗೆ ಜಾರಿಯಲ್ಲಿರುತ್ತದೆ. ಗುತ್ತಿಗೆ ಹಾಗೂ ತಾತ್ಕಾಲಿಕ ಕಾರ್ಮಿಕರು ಸೇರಿದಂತೆ ಇಎಸ್ಐ ಅಡಿಯಲ್ಲಿ ಇನ್ನೂ ನೋಂದಾವಣೆಯಾಗದ ಉದ್ಯೋಗದಾತರು ಮತ್ತು ಉದ್ಯೋಗಿಗಳು ನೋಂದಾವಣೆ ಪೂರ್ವದ ಯಾವುದೇ ಪರಿಶೀಲನೆ ಅಥವಾ ಹಿಂದಿನ ಅವಧಿಯ ಯಾವುದೇ ಬಾಕಿಪಾವತಿಯ ಬೇಡಿಕೆ ಇಲ್ಲದೇ ನೋಂದಾಯಿಸಿಕೊಳ್ಳಲು ಇದು ಒಂದು ಬಾರಿಯ ಅವಕಾಶವನ್ನು ಒದಗಿಸುತ್ತದೆ ಎಂದು ತಿಳಿಸಿದರು.

SPREE 2025 ರ ಪ್ರಮುಖ ಪ್ರಯೋಜನಗಳು:

ಉದ್ಯೋಗದಾತರು ತಮ್ಮ ಘಟಕಗಳು ಮತ್ತು ಉದ್ಯೋಗಿಗಳನ್ನು ಇಎಸ್‌ಐಸಿ ಪೋರ್ಟಲ್, ಶ್ರಮ್ ಸುವಿಧಾ ಮತ್ತು ಎಂಸಿಎ (ESIC Portal, Shram suvidhaa, MCA) ಪೋರ್ಟಲ್ ಮೂಲಕ ಡಿಜಿಟಲ್ ರೂಪದಲ್ಲಿ ನೋಂದಾಯಿಸಿಕೊಳ್ಳಬಹುದು.

ಉದ್ಯೋಗದಾತರು ತಾವು ಘೋಷಿಸಿದ ದಿನಾಂಕದಿಂದ ನೋಂದಣಿಯನ್ನು ಪರಿಗಣಿಸಲಾಗುತ್ತದೆ.ನೋಂದಣಿಯ ಪೂರ್ವ ಅವಧಿಗೆ ಯಾವುದೇ ವಂತಿಗೆ ಮತ್ತು ಸೌಲಭ್ಯವು ಅನ್ವಯವಾಗುವುದಿಲ್ಲ. ನೋಂದಣಿಯ ಪೂರ್ವ ಅವಧಿಯ ಯಾವುದೇ ದಾಖಲೆಗಳ ಪರಿಶೀಲನೆ ಅಥವಾ ಬಾಕಿ ಪಾವತಿ ಬೇಡಿಕೆ ಇರುವುದಿಲ್ಲ.

ಈ ಯೋಜನೆಯು ಸ್ವಯಂಪ್ರೇರಿತ ಅನುಸರಣೆಯನ್ನು ಪ್ರೋತ್ಸಾಹಿಸಿ, ಹಿಂದಿನ ಅವಧಿಗೆ ದಂಡ ಪಾವತಿಸಬೇಕಾದ ಭಯವನ್ನು ಹೋಗಲಾಡಿಸಿ, ನೋಂದಾವಣೆಯ ಪ್ರಕ್ರಿಯೆಯನ್ನು ಸರಳೀಕರಿಸಲಾಗಿದೆ. ಖಿಕಿಖಿಇಇ 2025 ನ್ನು ಪರಿಚಯಿಸುವ ಮೊದಲು ನಿಗಧಿತ ಅವಧಿಯಲ್ಲಿ ನೋಂದಾವಣೆ ಮಾಡದಿದ್ದಲ್ಲಿ ಕಾನೂನು ಕ್ರಮ ಹಾಗೂ ಹಿಂದಿನ ಅವಧಿಯ ಬಾಕಿ ಪಾವತಿ ಬೇಡಿಕೆಗೆ ಕಾರಣವಾಗುತ್ತಿತ್ತು. SPREE 2025 ಈ ಅಡೆತಡೆಗಳನ್ನು ನಿವಾರಿಸಿ ನೋಂದಾವಣೆಯಿಂದ ಬಿಟ್ಟುಹೋದ ಘಟಕಗಳು ಮತ್ತು ಕಾರ್ಮಿಕರನ್ನು ಇಎಸ್ಐ ವ್ಯಾಪ್ತಿಯೊಳಗೆ ಸೇರಿಸಿ ಸಾಮಾಜಿಕ ರಕ್ಷಣೆಯನ್ನು ಒದಗಿಸುತ್ತದೆ ಎಂದು ತಿಳಿಸಿದರು.

ಬೊಮ್ಮಸಂದ್ರ ಉಪ ಪ್ರಾದೇಶಿಕ ಕಛೇರಿಯ ಜಂಟಿ ನಿರ್ದೇಶಕರಾದ ಶ್ರೀಮತಿ ಕನಕ ಸೆಲ್ವಿ, ಅವರು ಮಾತನಾಡಿ ಖಿಕಿಖಿಇಇ 2025 ರ ಪ್ರಾರಂಭವು ಸಾಮಾಜಿಕ ರಕ್ಷಣೆಯನ್ನು ಒದಗಿಸುವ ಮತ್ತು ದೊರಕಿಸುವ ನಿಟ್ಟಿನಲ್ಲಿ ಕಾರ್ಮಿಕರ ರಾಜ್ಯ ವಿಮಾ ನಿಗಮದ ಒಂದು ಪ್ರಗತಿಪರ ಹೆಜ್ಜೆಯಾಗಿದ್ದು, ಸರಳ ಮತ್ತು ಹಿಂದಿನ ಅವಧಿಯ ಬಾಕಿಪಾವತಿಯ ಬೇಡಿಕೆಯ ಬಾಧ್ಯತೆಯಿಲ್ಲದೆ ನೋಂದಾವಣೆಗೊಂಡು ಸುಲಭವಾಗಿ ಸಾಮಾಜಿಕ ಭದ್ರತೆಗೆ ಒಳಪಡುವ ಯೋಜನೆಯಾಗಿದೆ. ಈ ಯೋಜನೆಯು ಉದ್ಯೋಗದಾತರು ಕೇವಲ ತಮ್ಮ ಕಾರ್ಯಪಡೆಯ ಕ್ರಮಬದ್ಧಗೊಳಿಸುವಿಕೆಯನ್ನು ಪ್ರೋತ್ಸಾಹಿಸುವುದಲ್ಲದೆ, ಇನ್ನೂ ಹೆಚ್ಚಿನ ಕಾರ್ಮಿಕರನ್ನು ವಿಶೇಷವಾಗಿ ತಾತ್ಕಾಲಿಕ ಮತ್ತು ಗುತ್ತಿಗೆ ವಲಯದ ಕಾರ್ಮಿಕರು ಇಎಸ್ಐ ಕಾಯ್ದೆಯಡಿಯಲ್ಲಿ ದೊರೆಯುವ ಆರೋಗ್ಯ ರಕ್ಷಣೆ ಹಾಗೂ ಸಾಮಾಜಿಕ ಸೌಲಭ್ಯಗಳನ್ನು ಪಡೆಯುವುದನ್ನು ಉತ್ತೇಜಿಸುತ್ತದೆ. ಇದರೊಂದಿಗೆ ಇಎಸ್‌ಐಸಿಯು ಆರೋಗ್ಯ ರಕ್ಷಣೆ ಮತ್ತು ಸಾಮಾಜಿಕ ಭದ್ರತೆಯನ್ನು ಅಗತ್ಯವಿರುವವರಿಗೆ ತಲುಪಿಸುವ ತನ್ನ ಬದ್ಧತೆಯನ್ನು ಉಳಿಸಿಕೊಂಡು ಭಾರತದ ಕಾರ್ಮಿಕ ಕಲ್ಯಾಣ ಕೇಂದ್ರಿತ ದೃಷ್ಟಿಕೋನಕ್ಕೆ ಅನುಗುಣವಾಗಿದೆ ಎಂದು ಮಾಹಿತಿ ನೀಡಿದರು.

ಪತ್ರಿಕಾಗೋಷ್ಠಿಯಲ್ಲಿ, ಕಾರ್ಮಿಕರ ರಾಜ್ಯ ವಿಮಾ ನಿಗಮದ ಜಂಟಿ ನಿರ್ದೇಶಕರುಗಳಾದ, ಸುನಿಲ್ ಕುಮಾರ್ ಮೆಹತೋ, ಮನೀಷ್ ಗುಪ್ತ, ದರ್ಬಾರಾ ಸಿಂಗ್, ಉಪನಿರ್ದೇಶಕರು ಸಾರ್ವಜನಿಕ ಸಂಪರ್ಕ, ವಿನೋದ್ ಖಾರಕ್ವಾಲ್, ಕಾರ್ಯಪಾಲಕ ಅಭಿಯಂತರರು, ಉಪ ನಿರ್ದೇಶಕರುಗಳಾದ ಅಭಿಷೇಕ್ ಕುಮಾರ್ ಸಿಂಗ್, ಮಹೇಶ್ ಕುಮಾರ್ ಪಾಂಡೆ, ಸಂಗ್ ಪ್ರಿಯಾ ಆನಂದ್ ಹಾಗೂ ಇತರರು ಹಾಜರಿದ್ದರು.

ಮುಂಜಾನೆ ಮಿತ್ರ ಪ್ರಾದೇಶಿ

# ಕಾಮಿಕರ ಕಲ್ಯಾಣಕ್ಕಾಗಿ SPREE ಯೋಜನೆ ಜಾರಿ

## ಕಾರ್ಮಿಕರ ರಾಜ್ಯ ವಿಮಾ ನಿಗಮದಿಂದ ಸಾಮಾಜಿಕ ಭದ್ರತಾ ವ್ಯಾಪ್ತಿಯನ್ನು ವಿಸ್ತರಿಸಲು ಒಂದು ವಿಶೇಷ ಉಪಕ್ರಮ: ಮನೋಜ್ ಕುಮಾರ್



ಬೆಂಗಳೂರು: ಕಾರ್ಮಿಕ ರಾಜ್ಯ ವಿಮಾ ನಿಗಮದಿಂದ ಸಾಮಾಜಿಕ ಭದ್ರತಾ ವ್ಯಾಪ್ತಿಯನ್ನು ವಿಸ್ತರಿಸುವ ಸಲುವಾಗಿ ವಿಶೇಷ ಉಪಕ್ರಮವಾಗಿ, ಕಾರ್ಮಿಕರ ಕಲ್ಯಾಣಕ್ಕಾಗಿ SPREE ಯೋಜನೆಯನ್ನು ಜಾರಿಗೊಳಿಸಲಾಗಿದೆ ಎಂದು ಪ್ರಾದೇಶಿಕ ನಿರ್ದೇಶಕರು ಮನೋಜ್ ಕುಮಾರ್ ತಿಳಿಸಿದರು.

ಇಂದು ಬೆಂಗಳೂರಿನ ಕಾರ್ಮಿಕರ ರಾಜ್ಯ ವಿಮಾ ನಿಗಮದ ಪ್ರಾದೇಶಿಕ ಕಚೇರಿಯಲ್ಲಿ ಹಮ್ಮಿಕೊಳ್ಳಲಾಗಿದ್ದ ಜಂಟಿ ಪತ್ರಿಕಾ ಗೋಷ್ಠಿಯಲ್ಲಿ ಮಾತನಾಡಿದ ಅವರು ಕಾರ್ಮಿಕರಿಗೆ ಸಾಮಾಜಿಕ ರಕ್ಷಣೆಯನ್ನು ನೀಡುವ ದೃಷ್ಟಿಯಲ್ಲಿ ಗರಿಷ್ಟ ಕಾರ್ಖಾನೆ ಉದ್ಯೋಗಿಗಳನ್ನು ಕಾಯ್ದೆಯಡಿ ತರುವ ಉದ್ದೇಶದಿಂದ ಕಾರ್ಮಿಕರ ರಾಜ್ಯ ವಿಮಾ ನಿಗಮವು (ಇಎಸ್‌ಐಸಿ) ಖಿಕಖಿಇಇ 2025 (Scheme for promotion of Registration of employers and employees ? ಉದ್ಯೋಗದಾತರು ಮತ್ತು ಉದ್ಯೋಗಿಗಳ ನೋಂದಣಿಯನ್ನು ಉತ್ತೇಜಿಸುವ ಯೋಜನೆ ? 2025) ಎಂಬ ನವೀಕೃತ ಯೋಜನೆಯನ್ನು ಜಾರಿಗೊಳಿಸಲಾಗಿದೆ. ಹಿಮಾಚಲ ಪ್ರದೇಶದ ಶಿಮ್ಲಾದಲ್ಲಿ ಮಾನ್ಯ ಕೇಂದ್ರ ಕಾರ್ಮಿಕ ಮತ್ತು ಉದ್ಯೋಗ ಹಾಗೂ ಯುವ ವ್ಯವಹಾರ ಮತ್ತು ಕ್ರೀಡಾ ಸಚಿವರಾದ ಡಾ. ಮನ್ಸುಖ್ ಮಾಂಡವೀಯ ಇವರ ಅಧ್ಯಕ್ಷತೆಯಲ್ಲಿ ನಡೆದ ಕಾರ್ಮಿಕರ ರಾಜ್ಯ ವಿಮಾ ನಿಗಮದ 196ನೇ ಸಭೆಯಲ್ಲಿ ಈ ಯೋಜನೆಯನ್ನು ಅನುಮೋದಿಸಲಾಗಿದೆ ಎಂದು ತಿಳಿಸಿದರು.

ವಿಶ್ವದ ಅತಿ ದೊಡ್ಡ ಸಾಮಾಜಿಕ ಸುರಕ್ಷಾ ಸಂಸ್ಥೆ ಕಾರ್ಮಿಕರ ರಾಜ್ಯ ವಿಮಾ ನಿಗಮವು ಕಾರ್ಮಿಕರ ರಾಜ್ಯ ವಿಮಾ ಕಾಯ್ದೆ 1948 ರ ಅಡಿಯಲ್ಲಿ ರಚಿಸಿದ ಭಾರತದ ಸಂಸತ್ತಿನಲ್ಲಿ ಅನುಮೋದನೆಗೊಂಡ ಸಾಮಾಜಿಕ ಭದ್ರತಾ ಕಾಯ್ದೆಯಾಗಿದ್ದು, ಇದರಡಿಯಲ್ಲಿ ನೋಂದಾಯಿಸಲಾದ ಕಾರ್ಮಿಕರಿಗೆ ಅನಾರೋಗ್ಯ, ಮಾತೃತ್ವ, ಉದ್ಯೋಗ ಸಂಬಂಧಿ ಅಪಘಾತದಿಂದ ಆದ ಗಾಯ, ಅಂಗವಿಕಲತೆ ಮತ್ತು ಮರಣದಂತಹ ಆಕಸ್ಮಿಕ ಸಂದರ್ಭಗಳಲ್ಲಿ ವೈದ್ಯಕೀಯ ಆರೈಕೆ ಮತ್ತು ನಗದು ಸೌಲಭ್ಯಗಳನ್ನು ಒದಗಿಸುತ್ತದೆ ಎಂದು ತಿಳಿಸಿದರು.

ಇ.ಎಸ್.ಐ ಯೋಜನೆಯು ಕರ್ನಾಟಕ ರಾಜ್ಯದ ಎಲ್ಲಾ 31 ಜಿಲ್ಲೆಗಳಲ್ಲಿ ಜಾರಿಗೆ ತರಲಾಗಿದ್ದು, ಒಟ್ಟು 35.00 ಲಕ್ಷ ವಿಮಾದಾರರು ಮತ್ತು 140 ಲಕ್ಷ ಕುಟುಂಬ ಸದಸ್ಯರುಗಳು ಈ ಯೋಜನೆಯ ಫಲಾನುಭವಿಗಳಾಗಿದ್ದಾರೆ. ಒಟ್ಟು 1.87 ಲಕ್ಷ ಉದ್ಯೋಗದಾತರು ಈ ಯೋಜನೆಯಡಿಯಲ್ಲಿ ನೋಂದಾಯಿಸಿಕೊಂಡಿದ್ದಾರೆ ಎಂದು ಮಾಹಿತಿ ನೀಡಿದರು.

ಕಾರ್ಮಿಕರ ರಾಜ್ಯ ವಿಮಾ ನಿಗಮದ 196ನೇ ಸಭೆಯಲ್ಲಿ ಇ.ಎಸ್.ಐ ಕಾಯ್ದೆಯ ಅನುಸರಣೆಯನ್ನು ಉತ್ತೇಜಿಸಲು ಕ್ಷಮಾದಾನ ಯೋಜನೆ 2025 ಎಂಬ ಯೋಜನೆಯನ್ನು ಪ್ರಾರಂಭಿಸಿದ್ದು, ಈ ಯೋಜನೆಯು 1ನೇ ಅಕ್ಟೋಬರ್ 2025 ರಿಂದ 30ನೇ ಸೆಪ್ಟೆಂಬರ್ 2026 ರವರೆಗೆ ಜಾರಿಯಲ್ಲಿದ್ದು, ಇದರಲ್ಲಿ ಉದ್ಯೋಗದಾತರು ಮತ್ತು ನಿಗಮದ ನಡುವಿನ ವ್ಯಾಜ್ಯಗಳನ್ನು ಪರಸ್ಪರ ಇತ್ಯರ್ಥಪಡಿಸಿ ಪರಿಹಾರವನ್ನು ಕಂಡುಕೊಳ್ಳಬಹುದಾಗಿದೆ. ವ್ಯಾಜ್ಯಗಳನ್ನು ಕಡಿಮೆ ಮಾಡುವ ಗುರಿಯನ್ನು ಇದು ಹೊಂದಿದ್ದು, ಸರಳೀಕೃತ ಸರಾಗ ವ್ಯವಹಾರವನ್ನು ಪ್ರೊ?ರೀತ್ಸಾಹಿಸುತ್ತದೆ ಎಂದು ತಿಳಿಸಿದರು.

ಕಾರ್ಮಿಕರ ರಾಜ್ಯ ವಿಮಾ ನಿಗಮದ ಸಹೋದರಿ ಸಂಸ್ಥೆಯಾದ ಕಾರ್ಮಿಕರ ಭವಿಷ್ಯ ನಿಧಿ ಸಂಘಟನೆ ಅಡಿಯಲ್ಲಿ (ಇ.ಪಿ.ಎಫ್.ಓ)– ಉದ್ಯೋಗ ಪ್ರೊ?ರೀತ್ಸಾಹಕ ಯೋಜನೆ (ಇ.ಎಲ್.ಐ) ಎಂಬ ನವೀನ ಯೋಜನೆಯನ್ನು ಭಾರತ ಸರ್ಕಾರವು ಇತ್ತೀಚೆಗೆ ಪರಿಚಯಿಸಿದ್ದು, ಈ ಯೋಜನೆಯಡಿಯಲ್ಲಿ, ಸಾಮಾಜಿಕ ಭದ್ರತೆಯ ಎಲ್ಲ ವಲಯಗಳಲ್ಲಿ, ವಿಶೇಷವಾಗಿ ಉತ್ಪಾದಕ ವಲಯದಲ್ಲಿ ಉದ್ಯೋಗ ಸೃಷ್ಟಿಯನ್ನು ಪ್ರೋತ್ಸಾಹಿಸುವ ನಿಟ್ಟಿನಲ್ಲಿ, ಮೊದಲಬಾರಿ ಮಾಸಿಕ ರೂ.15000/– ವರೆಗೆ ವೇತನ ಪಡೆದ ಉದ್ಯೋಗಿಗಳ ಉದ್ಯೋಗದಾತರು 2 ವರ್ಷಗಳವರೆಗೆ ಪ್ರೋತ್ಸಾಹದಾಯಕ ಇನ್ಸೆಂಟಿವ್ ಪಡೆಯಬಹುದು ಮತ್ತು ಉತ್ಪಾದನಾ ವಲಯದಲ್ಲಿ ಹೆಚ್ಚುವರಿ ಉದ್ಯೋಗವನ್ನು ಸೃಷ್ಟಿಸಿದಲ್ಲಿ ಮತ್ತೆ ಎರಡು ವರ್ಷಕ್ಕೆ ವಿಸ್ತರಿಸಲಾಗುವುದು. ಈ ಯೋಜನೆಯಡಿ ದೊರೆಯುವ ಸೌಲಭ್ಯವು 2025ನೇ ಆಗಸ್ಟ್ 01 ರಿಂದ 2027ನೇ ಜುಲೈ 31 ರ ಅವಧಿಯಲ್ಲಿ ಸೃಷಿಯಾದ ಉದ್ಯೋಗಗಳಿಗೆ ಅನ್ವಯಿಸುತ್ತದೆ ಎಂದು ತಿಳಿಸಿದರು.

ಕಾರ್ಮಿಕರ ರಾಜ್ಯ ವಿಮಾ ನಿಗಮದ ಪೀಣ್ಯ ಉಪ ಪ್ರಾದೇಶಿಕ ಕಛೇರಿಯ ಜಂಟಿ ನಿರ್ದೇಶಕರಾದ ಅರಸರ ಕಿಶೋರ್ ಅವರು ಮಾತನಾಡುತ್ತಾ, ಕಾರ್ಮಿಕರ ರಾಜ್ಯ ವಿಮಾ ನಿಗಮವು ಪ್ರಸ್ತುತ ಬೆಂಗಳೂರಿನ ಬಿನ್ನಿಪೇಟೆಯಲ್ಲಿ ಪ್ರಾದೇಶಿಕ ಕಛೇರಿಯನ್ನು ಹೊಂದಿದ್ದು, 06 ಉಪ ಪ್ರಾದೇಶಿಕ ಕಛೇರಿಗಳನ್ನು ಬೆಂಗಳೂರು ದಕ್ಷಿಣದ ಬೊಮ್ಮಸಂದ್ರ, ಬೆಂಗಳೂರು ಉತ್ತರದ ಪೀಣ್ಯ, ಕಲ್ಬುರ್ಗಿ, ಹುಬ್ಬಳ್ಳಿ, ಮಂಗಳೂರು ಮತ್ತು ಮೈಸೂರಿನಲ್ಲಿ ಹೊಂದಿದೆ ಎಂದು ಮಾಹಿತಿ ನೀಡಿದರು.

ಉದ್ಯೋಗದಾತರು ಮತ್ತು ಉದ್ಯೋಗಿಗಳ ನೋಂದಣಿಯನ್ನು ಉತ್ತೇಜಿಸುವ ಯೋಜನೆ (ಖಿಕಖಿಇಇ) 2025 ಕಾರ್ಮಿಕರ ರಾಜ್ಯ ವಿಮಾ ನಿಗಮವು ಸಾಮಾಜಿಕ ಭದ್ರತಾ ವ್ಯಾಪ್ತಿಯನ್ನು ವಿಸ್ತರಿಸಲು ಅನುಮೋದಿಸಿದ ಒಂದು ವಿಶೇಷ ಉಪಕ್ರಮವಾಗಿದ್ದು, ಕಾಯ್ದೆಯ ನಿಬಂಧನೆಗಳಿಗೆ ಅನುಸಾರವಾಗಿ 10 ಮತ್ತು ಅದಕ್ಕಿಂತ ಹೆಚ್ಚು ಉದ್ಯೋಗಿಗಳನ್ನು ಹೊಂದಿರುವ ಎಲ್ಲಾ ಘಟಕಗಳು/ಸಂಸ್ಥೆಗಳು ತಮ್ಮ ಸ್ಥಾಪನೆಯ 15 ದಿನಗಳೊಳಗಾಗಿ ಕಾಯ್ದೆಯಡಿ ನೋಂದಾಯಿಸಿಕೊಳ್ಳಬೇಕು.

ಯಾವುದೇ ಕಾರಣದಿಂದ ಉದ್ಯೋಗದಾತರು ತಮ್ಮ ಸಂಸ್ಥೆ/ಘಟಕವನ್ನು ಇನ್ನೂ ನೋಂದಾಯಿಸದಿದ್ದಲ್ಲಿ, 2025ನೇ ಜುಲೈ 1ರಿಂದ ರಿಂದ ಡಿಸೆಂಬರ್ 31 ಒಳಗೆ ನೋಂದಾಯಿಸಿಕೊಳ್ಳಬಹುದು. ಈ ಯೋಜನೆಯು 6 ತಿಂಗಳ ಅವಧಿಯ ವರೆಗೆ ಜಾರಿಯಲ್ಲಿರುತ್ತದೆ. ಗುತ್ತಿಗೆ ಹಾಗೂ ತಾತ್ಕಾಲಿಕ ಕಾರ್ಮಿಕರು ಸೇರಿದಂತೆ ಇಎಸ್‌ಐ ಅಡಿಯಲ್ಲಿ ಇನ್ನೂ ನೋಂದಾವಣೆಯಾಗದ ಉದ್ಯೋಗದಾತರು ಮತ್ತು ಉದ್ಯೋಗಿಗಳು ನೋಂದಾವಣಿ ಪೂರ್ವದ ಯಾವುದೇ ಪರಿಶೀಲನೆ ಅಥವಾ ಹಿಂದಿನ ಅವಧಿಯ ಯಾವುದೇ ಬಾಕಿಪಾವತಿಯ ಬೇಡಿಕೆ ಇಲ್ಲದೇ ನೋಂದಾಯಿಸಿಕೊಳ್ಳಲು ಇದು ಒಂದು ಬಾರಿಯ ಅವಕಾಶವನ್ನು ಒದಗಿಸುತ್ತದೆ ಎಂದು ತಿಳಿಸಿದರು.

SPREE 2025 ರ ಪ್ರಮುಖ ಪ್ರಯೋಜನಗಳು:

ಉದ್ಯೋಗದಾತರು ತಮ್ಮ ಘಟಕಗಳು ಮತ್ತು ಉದ್ಯೋಗಿಗಳನ್ನು ಇಎಸ್‌ಐಸಿ ಪೋರ್ಟಲ್, ಶ್ರಮ್ ಸುವಿಧಾ ಮತ್ತು ಎಂಸಿಎ (ESIC Portal, Shram suvidhaa, MCA) ಪೋರ್ಟಲ್ ಮೂಲಕ ಡಿಜಿಟಲ್ ರೂಪದಲ್ಲಿ ನೋಂದಾಯಿಸಿಕೊಳ್ಳಬಹುದು.

ಉದ್ಯೋಗದಾತರು ತಾವು ಘೋಷಿಸಿದ ದಿನಾಂಕದಿಂದ ನೋಂದಣಿಯನ್ನು ಪರಿಗಣಿಸಲಾಗುತ್ತದೆ.ನೋಂದಣಿಯ ಪೂರ್ವ ಅವಧಿಗೆ ಯಾವುದೇ ವಂತಿಗೆ ಮತ್ತು ಸೌಲಭ್ಯವು ಅನ್ವಯವಾಗುವುದಿಲ್ಲ. ನೋಂದಣಿಯ ಪೂರ್ವ ಅವಧಿಯ ಯಾವುದೇ ದಾಖಲೆಗಳ ಪರಿಶೀಲನೆ ಅಥವಾ ಬಾಕಿ ಪಾವತಿ ಬೇಡಿಕೆ ಇರುವುದಿಲ್ಲ.

ಈ ಯೋಜನೆಯು ಸ್ವಯಂಪ್ರೇರಿತ ಅನುಸರಣೆಯನ್ನು ಪ್ರೋತ್ಸಾಹಿಸಿ, ಹಿಂದಿನ ಅವಧಿಗೆ ದಂಡ ಪಾವತಿಸಬೇಕಾದ ಭಯವನ್ನು ಹೋಗಲಾಡಿಸಿ, ನೋಂದಾವಣಿಯ ಪ್ರಕ್ರಿಯೆಯನ್ನು ಸರಳೀಕರಿಸಲಾಗಿದೆ. ಖಿಕಖಿಇಇ 2025 ನ್ನು ಪರಿಚಯಿಸುವ ಮೊದಲು ನಿಗಧಿತ ಅವಧಿಯಲ್ಲಿ ನೋಂದಾವಣೆ ಮಾಡದಿದ್ದಲ್ಲಿ ಕಾನೂನು ಕ್ರಮ ಹಾಗೂ ಹಿಂದಿನ ಅವಧಿಯ ಬಾಕಿ ಪಾವತಿ ಬೇಡಿಕೆಗೆ ಕಾರಣವಾಗುತ್ತಿತ್ತು, ಖಿಕಖಿಇಇ 2025 ಈ ಅಡೆತಡೆಗಳನ್ನು ನಿವಾರಿಸಿ ನೋಂದಾವಣೆಯಿಂದ ಬಿಟ್ಟುಹೋದ ಘಟಕಗಳು ಮತ್ತು ಕಾರ್ಮಿಕರನ್ನು ಇಎಸ್‌ಐ ವ್ಯಾಪ್ತಿಯೊಳಗೆ ಸೇರಿಸಿ ಸಾಮಾಜಿಕ ರಕ್ಷಣೆಯನ್ನು ಒದಗಿಸುತ್ತದೆ ಎಂದು ತಿಳಿಸಿದರು.

ಬೊಮ್ಮಸಂದ್ರ ಉಪ ಪ್ರಾದೇಶಿಕ ಕಛೇರಿಯ ಜಂಟಿ ನಿರ್ದೇಶಕರಾದ ಶ್ರೀಮತಿ ಕಣಿತ ಸೆಲ್ವಿ, ಅವರು ಮಾತನಾಡಿ ಖಿಕಖಿಇಇ 2025 ರ ಪ್ರಾರಂಭವು ಸಾಮಾಜಿಕ ರಕ್ಷಣೆಯನ್ನು ಒದಗಿಸುವ ಮತ್ತು ದೊರಕಿಸುವ ನಿಟ್ಟಿನಲ್ಲಿ ಕಾರ್ಮಿಕರ ರಾಜ್ಯ ವಿಮಾ ನಿಗಮದ ಒಂದು ಪ್ರಗತಿಪರ ಹೆಜ್ಜೆಯಾಗಿದ್ದು, ಸರಳ ಮತ್ತು ಹಿಂದಿನ ಅವಧಿಯ ಬಾಕಿಪಾವತಿಯ ಬೇಡಿಕೆಯ ಭಾಧ್ಯತೆಯಿಲ್ಲದೆ ನೋಂದಾವಣೆಗೊಂಡು ಸುಲಭವಾಗಿ ಸಾಮಾಜಿಕ ಭದ್ರತೆಗೆ ಒಳಪಡುವ ಯೋಜನೆಯಾಗಿದೆ. ಈ ಯೋಜನೆಯು ಉದ್ಯೋಗದಾತರು ಕೇವಲ ತಮ್ಮ ಕಾರ್ಯಪಡೆಯ ಕ್ರಮಬದ್ಧಗೊಳಿಸುವಿಕೆಯನ್ನು ಪ್ರೋತ್ಸಾಹಿಸುವುದಲ್ಲದೆ, ಇನ್ನೂ ಹೆಚ್ಚಿನ ಕಾರ್ಮಿಕರನ್ನು ವಿಶೇಷವಾಗಿ ತಾತ್ಕಾಲಿಕ ಮತ್ತು ಗುತ್ತಿಗೆ ವಲಯದ ಕಾರ್ಮಿಕರು ಇಎಸ್‌ಐ ಕಾಯ್ದೆಯಡಿಯಲ್ಲಿ ದೊರೆಯುವ ಆರೋಗ್ಯ ರಕ್ಷಣೆ ಹಾಗೂ ಸಾಮಾಜಿಕ ಸೌಲಭ್ಯಗಳನ್ನು ಪಡೆಯುವುದನ್ನು ಉತ್ತೇಜಿಸುತ್ತದೆ. ಇದರೊಂದಿಗೆ ಇಎಸ್‌ಐಸಿಯು ಆರೋಗ್ಯ ರಕ್ಷಣೆ ಮತ್ತು ಸಾಮಾಜಿಕ ಭದ್ರತೆಯನ್ನು ಅಗತ್ಯವಿರುವವರಿಗೆ ತಲುಪಿಸುವ ತನ್ನ ಬದ್ಧತೆಯನ್ನು ಉಳಿಸಿಕೊಂಡು ಭಾರತದ ಕಾರ್ಮಿಕ ಕಲ್ಯಾಣ ಕೇಂದ್ರಿತ ದೃಷ್ಟಿಕೋನಕ್ಕೆ ಅನುಗುಣವಾಗಿದೆ ಎಂದು ಮಾಹಿತಿ ನೀಡಿದರು.

ಪತ್ರಿಕಾಗೋಷ್ಠಿಯಲ್ಲಿ, ಕಾರ್ಮಿಕರ ರಾಜ್ಯ ವಿಮಾ ನಿಗಮದ ಜಂಟಿ ನಿರ್ದೇಶಕರುಗಳಾದ, ಸುನಿಲ್ ಕುಮಾರ್ ಮೆಹತೋ, ಮನೀಷ್ ಗುಪ್ತ, ದರ್ಬರಾ ಸಿಂಗ್, ಉಪನಿರ್ದೇಶಕರು ಸಾರ್ವಜನಿಕ ಸಂಪರ್ಕ, ವಿನೋದ್ ಖಾರಕ್ವಾಲ್, ಕಾರ್ಯಪಾಲಕ ಅಭಿಯಂತರರು, ಉಪ ನಿರ್ದೇಶಕರುಗಳಾದ ಅಭಿಷೇಕ್ ಕುಮಾರ್ ಸಿಂಗ್, ಮಹೇಶ್ ಕುಮಾರ್ ಪಾಂಡೆ, ಸಂಗ್ ಪ್ರಿಯಾ ಆನಂದ್ ಹಾಗೂ ಇತರರು ಹಾಜರಿದ್ದರು.

# ಕಾರ್ಮಿಕರ ರಾಜ್ಯ ವಿಮಾ ನಿಗಮದಿಂದ ಸಾಮಾಜಿಕ ಭದ್ರತಾ ವ್ಯಾಪ್ತಿಯನ್ನು ವಿಸ್ತರಿಸಲು ಒಂದು ವಿಶೇಷ ಉಪಕ್ರಮ – ಮನೋಜ್ ಕುಮಾರ್

**ಬೆಂಗಳೂರು, ಜುಲೈ 18 (ಕರ್ನಾಟಕ ವಾರ್ತೆ) :** ಕಾರ್ಮಿಕ ರಾಜ್ಯ ವಿಮಾ ನಿಗಮದಿಂದ ಸಾಮಾಜಿಕ ಭದ್ರತಾ ವ್ಯಾಪ್ತಿಯನ್ನು ವಿಸ್ತರಿಸುವ ಸಲುವಾಗಿ ವಿಶೇಷ ಉಪಕ್ರಮವಾಗಿ, ಕಾರ್ಮಿಕರ ಕಲ್ಯಾಣಕ್ಕಾಗಿ ಖಕಖಇಇ ಯೋಜನೆಯನ್ನು ಜಾರಿಗೊಳಿಸಲಾಗಿದೆ ಎಂದು ಪ್ರಾದೇಶಿಕ ನಿರ್ದೇಶಕರು ಮನೋಜ್ ಕುಮಾರ್ ತಿಳಿಸಿದರು.

19.07.2025 ಮಾರ್ದನಿ

ಇಂದು ಬೆಂಗಳೂರಿನ ಕಾರ್ಮಿಕರ ರಾಜ್ಯ ವಿಮಾ ನಿಗಮದ ಪ್ರಾದೇಶಿಕ ಕಚೇರಿಯಲ್ಲಿ ಹಮ್ಮಿಕೊಳ್ಳಲಾಗಿದ್ದ ಜಂಟಿ ಪತ್ರಿಕಾ ಗೋಷ್ಠಿಯಲ್ಲಿ ಮಾತನಾಡಿದ ಅವರು ಕಾರ್ಮಿಕರಿಗೆ ಸಾಮಾಜಿಕ ರಕ್ಷಣೆಯನ್ನು ನೀಡುವ ದೃಷ್ಠಿಯಲ್ಲಿ ಗರಿಷ್ಠ ಕಾರ್ಖಾನೆ ಉದ್ಯೋಗಿಗಳನ್ನು ಕಾಯ್ದೆಯಡಿ ತರುವ ಉದ್ದೇಶದಿಂದ ಕಾರ್ಮಿಕರ ರಾಜ್ಯ ವಿಮಾ ನಿಗಮವು (ಇಎಸ್‌ಐಸಿ) ಖಕಖಇಇ 2025 (ಖಭ್ನಿಜಟಜ ಜಿಂಡಿ ರಿಡಿಂಟಂಣುಂಟಿ ಂಜಿ ಖಜಝಣಡಿಚಿಣುಂಟಿ ಂಜಿ ಜಟರಿಟಂಥಿಜಡಿ ಚಿಟಿಜ ಜಟರಿಟಂಥಿಜಜ  ಉದ್ಯೋಗದಾತರು ಮತ್ತು ಉದ್ಯೋಗಿಗಳ ನೋಂದಣಿಯನ್ನು ಉತ್ತೇಜಿಸುವ ಯೋಜನೆ  2025) ಎಂಬ ನವೀಕೃತ ಯೋಜನೆಯನ್ನು ಜಾರಿಗೊಳಿಸಲಾಗಿದೆ. ಹಿಮಾಚಲ ಪ್ರದೇಶದ ಶಿಮ್ಲಾದಲ್ಲಿ ಮಾನ್ಯ ಕೇಂದ್ರ ಕಾರ್ಮಿಕ ಮತ್ತು ಉದ್ಯೋಗ ಹಾಗೂ ಯುವ ವ್ಯವಹಾರ ಮತ್ತು ಕ್ರೀಡಾ ಸಚಿವರಾದ ಡಾ. ಮನ್ಸುಖ್ ಮಾಂಡವೀಯ ಇವರ ಅಧ್ಯಕ್ಷತೆಯಲ್ಲಿ ನಡೆದ ಕಾರ್ಮಿಕರ ರಾಜ್ಯ ವಿಮಾ ನಿಗಮದ 196ನೇ ಸಭೆಯಲ್ಲಿ ಈ ಯೋಜನೆಯನ್ನು ಅನುಮೋದಿಸಲಾಗಿದೆ ಎಂದು ತಿಳಿಸಿದರು.

ವಿಶ್ವದ ಅತಿ ದೊಡ್ಡ ಸಾಮಾಜಿಕ ಸುರಕ್ಷಾ ಸಂಸ್ಥೆ ಕಾರ್ಮಿಕರ ರಾಜ್ಯ ವಿಮಾ ನಿಗಮವು 'ಕಾರ್ಮಿಕರ ರಾಜ್ಯ ವಿಮಾ ಕಾಯ್ದೆ 1948' ರ ಅಡಿಯಲ್ಲಿ ರಚಿಸಿದ ಭಾರತದ ಸಂಸತ್ತಿನಲ್ಲಿ ಅನುಮೋದನೆಗೊಂಡ ಸಾಮಾಜಿಕ ಭದ್ರತಾ ಕಾಯ್ದೆಯಾಗಿದ್ದು, ಇದರಡಿಯಲ್ಲಿ ನೋಂದಾಯಿಸಲಾದ ಕಾರ್ಮಿಕರಿಗೆ ಅನಾರೋಗ್ಯ, ಮಾತೃತ್ವ, ಉದ್ಯೋಗ ಸಂಬಂಧಿ ಅಪಘಾತದಿಂದ ಆದ ಗಾಯ, ಅಂಗವಿಕಲತೆ ಮತ್ತು ಮರಣದಂತಹ ಆಕಸ್ಮಿಕ ಸಂದರ್ಭಗಳಲ್ಲಿ ವೈದ್ಯಕೀಯ ಆರೈಕೆ ಮತ್ತು ನಗದು ಸೌಲಭ್ಯಗಳನ್ನು ಒದಗಿಸುತ್ತದೆ ಎಂದು ತಿಳಿಸಿದರು.

ಇ.ಎಸ್.ಐ ಯೋಜನೆಯು ಕರ್ನಾಟಕ ರಾಜ್ಯದ ಎಲ್ಲಾ 31 ಜಿಲ್ಲೆಗಳಲ್ಲಿ ಜಾರಿಗೆ ತರಲಾಗಿದ್ದು, ಒಟ್ಟು 35.00 ಲಕ್ಷ ವಿಮಾದಾರರು ಮತ್ತು 140 ಲಕ್ಷ ಕುಟುಂಬ ಸದಸ್ಯರುಗಳು ಈ ಯೋಜನೆಯ ಫಲಾನುಭವಿಗಳಾಗಿದ್ದಾರೆ. ಒಟ್ಟು 1.87 ಲಕ್ಷ ಉದ್ಯೋಗದಾತರು ಈ ಯೋಜನೆಯಡಿಯಲ್ಲಿ ನೋಂದಾಯಿಸಿಕೊಂಡಿದ್ದಾರೆ ಎಂದು ಮಾಹಿತಿ ನೀಡಿದರು.